ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು –೮೫

# ಪಟ್ಟಿ – ೧೪

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತನೆಯ ಅಧಿವೇಶನ

(ಮುಂದುವರೆದ ಉಪವೇಶನ)

ಮಂಗಳವಾರ, ದಿನಾಂಕ : ೦೫ ನೇ ಜುಲೈ, ೨೦೧೬.

---

## ಸಮೂಹ – II

೧. ಇಂಧನ ಸಚಿವರು

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೩. ಸಹಕಾರ ಮತ್ತು ಸಕ್ಕರೆ ಸಚಿವರು

೪. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೫. ಕೃಷಿ ಸಚಿವರು

೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು

೭. ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು

---

## ಕೂಡಗಿಯಲ್ಲಿರುವ ಎನ್.ಟಿ.ಪಿ.ಎಸ್. ಯೋಜನೆ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ):–**

೧೫೯೧ (೧೬೯೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯ ಕೂಡಗಿಯಲ್ಲಿರುವ ಎನ್.ಟಿ.ಪಿ.ಎಸ್. ವಿದ್ಯುತ್ ಉತ್ಪಾದನೆಯನ್ನು ಆರಂಭಿಸಲಾಗಿದೆಯೇ;

(ಆ) ಆಗಿದ್ದಲ್ಲಿ, ಇದರಿಂದ ರಾಜ್ಯಕ್ಕೆ ಎಷ್ಟು ಪ್ರಮಾಣದ ವಿದ್ಯುತ್ ಲಭ್ಯವಾಗಿದೆ ಯಾವ ದಿನಾಂಕದಿಂದ ಈ ವಿದ್ಯುತ್ ಅನ್ನು ಪಡೆದುಕೊಳ್ಳುವ ದೃಷ್ಟಿಯಿಂದ ರಾಜ್ಯ ಸರ್ಕಾರದ ತಯಾರಿ ಏನು ;

(ಇ) ಈ ಘಟಕಕ್ಕೆ ಎಷ್ಟು ಪ್ರಮಾಣದ ಜಮೀನನ್ನು ವಶಪಡಿಸಿಕೊಳ್ಳಲಾಗಿದೆ ಹಾಗೂ ಯಾರಿಂದ ಪಡೆದುಕೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಈ ಭಾಗದ ರೈತರಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆಯೇ? (ವಿವರ ನೀಡುವುದು) ಮಾಡಲಾಗದಿದ್ದರೆ ಯಾವಾಗ ಮಾಡಲಾಗುವುದು?

## "ನಿರಂತರ ಜ್ಯೋತಿ" ಯೋಜನೆಯ ಕಾಮಗಾರಿಯ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ):–**

೧೫೯೨ (೧೬೯೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಕೈಗೊಂಡ ನಿರಂತರ ಜ್ಯೋತಿ' ಯೋಜನೆಯ ಕಾಮಗಾರಿಗಳು ಯಾವುವು ಪ್ರತಿ ಕಾಮಗಾರಿವಾರು ವಿವರ ನೀಡುವುದು ;

(ಆ) ಯಾವ ಯಾವ ಗ್ರಾಮಗಳಿಗೆ ನಿರಂತರ ಜ್ಯೋತಿ ಯೋಜನೆಯಡಿ ಸಂಪರ್ಕ ಕಲ್ಪಿಸಲಾಗಿದೆ ;

(ಇ) ನಿರಂತರ ಜ್ಯೋತಿ ಯೋಜನೆಯಡಿಯಲ್ಲಿ ವಿಜಯಪುರ ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಎಷ್ಟು ಫೆಡರ್‌ಗಳ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ?

## ಬಾಗಲಕೋಟೆ ತೋಟಗಾರಿಕಾ ವಿಜ್ಞಾನ ವಿಶ್ವ ವಿದ್ಯಾಲಯಕ್ಕೆ ನೀಡಿರುವ ಅನುದಾನ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ):–**

೧೫೯೩ (೧೬೯೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ತೋಟಗಾರಿಕಾ ವಿಜ್ಞಾನಗಳ ವಿಶ್ವ ವಿದ್ಯಾಲಯಕ್ಕೆ ಕಳೆದ ೦೨ ವರ್ಷಗಳಿಂದ ಒದಗಿಸಿರುವ ಅನುದಾನವೆಷ್ಟು; ಹಾಗೂ ವಿಶೇಷ ಅನುದಾನ ಎಷ್ಟು ;

(ಆ) ಈ ವಿಶ್ವ ವಿದ್ಯಾಲಯದಲ್ಲಿ ಯಾವ ಯಾವ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ;

(ಇ) ಈ ವಿಶ್ವ ವಿದ್ಯಾಲಯದಡಿ ರೈತರಿಗಾಗಿ ಇರುವ ಕಾರ್ಯಕ್ರಮಗಳು ಯಾವುವು? (ವಿವರ ನೀಡುವುದು)

## ಪಶುಸಂಗೋಪನೆ ಇಲಾಖೆಯಲ್ಲಿ "ಧನ್ವಂತರಿ" ಯೋಜನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ):–**

೧೫೯೪ (೧೭೦೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಇಲಾಖೆಯ ೧೦೮ ಮಾದರಿಯಂತೆ ಪಶುಸಂಗೋಪನಾ ಇಲಾಖೆಯಲ್ಲಿ "ಧನ್ವಂತರಿ" ನೂತನ ಯೋಜನೆಯನ್ನು ಜಾರಿಗೆ ತರಲಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಏಜನ್ಸಿಗೆ ಎಷ್ಟು ಮೊತ್ತಕ್ಕೆ ನೀಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆ ಜಾರಿಯಾಗದಿದ್ದಲ್ಲಿ ಇದಕ್ಕೆ ಕಾರಣಗಳೇನು; ಈ ನೂತನ ಯೋಜನೆ ಜಾರಿಗೆ ತರುವ ನಿಟ್ಟಿನಲ್ಲಿ ಸರ್ಕಾರ ಮುಂದಾಗುವುದೇ; ಹಾಗಿದ್ದಲ್ಲಿ, ಸರ್ಕಾರದ ಮುಂದಿರುವ ಯೋಜನೆಗಳಾವುವು? (ಮಾಹಿತಿ ನೀಡುವುದು)

## ಪಶುಸಂಗೋಪನಾ ಇಲಾಖೆಯನ್ನು ಮರು ಸಂಘಟನೆ ಮಾಡುವ ಯೋಜನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ):–**

೧೫೫೫ (೧೭೦೨) ಮಾನ್ಯ ಪಶುಸಂಗೋಪನಾ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನಾ ಇಲಾಖೆಯನ್ನು ಮರು ಸಂಘಟನೆ (Re-Organisation) ಮಾಡುವ ಯೋಜನೆ ಕಾರ್ಯರೂಪಕ್ಕೆ ಬಂದಿದೆಯೇ; ಬಂದಿದ್ದರೆ, ಸಂಪೂರ್ಣ ಮಾಹಿತಿ ನೀಡುವುದು ;

(ಆ) ಇಲಾಖೆಯ ಮರು ಸಂಘಟನೆ (Re-Organisation) ಯಿಂದ ಸರ್ಕಾರಕ್ಕೆ ಹಾಗೂ ಇಲಾಖೆಗೆ ಆಗುವ ಲಾಭಗಳೇನು; ಇದರಿಂದ ಸರ್ಕಾರದ ಮೇಲೆ ಬೀಳುವ ಹೆಚ್ಚುವರಿ ಆರ್ಥಿಕ ವೆಚ್ಚ ಎಷ್ಟು; (ಮಾಹಿತಿ ನೀಡುವುದು)

(ಇ) ಪಶುಸಂಗೋಪನಾ ಇಲಾಖೆಯ ಮರು ಸಂಘಟನೆ (Re-Organisation) ಮಾಡುವ ಯೋಜನೆ ನೆನೆಗುದಿಗೆ ಬಿದ್ದಿರುವುದು ನಿಜವೇ; ಹಾಗಿದ್ದರೆ, ಕಾರಣಗಳನ್ನು ನೀಡುವುದು;

(ಈ) ಇಲಾಖೆಯ ಮರು ಸಂಘಟನೆ (Re-Organisation) ಯಿಂದ ಹೊಸದಾಗಿ ಸೃಜಿಸಲಾದ ಹುದ್ದೆಗಳ ಸಂಖ್ಯೆ ಎಷ್ಟು? (ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)

## ಶಹಬಾದ್ ಪಟ್ಟಣದ ಮಧ್ಯ ಭಾಗದಲ್ಲಿರುವ ನಾಲೆಗಳು ಕಲುಷಿತಗೊಂಡಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ):–**

೧೫೫೬ (೧೭೦೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಹಬಾದ್ ಪಟ್ಟಣದ ಮಧ್ಯ ಭಾಗದಲ್ಲಿ ಹರಿದು ಹೋಗುತ್ತಿರುವ ಹಳ್ಳ ಹಾಗೂ ಪಟ್ಟಣದಲ್ಲಿರುವ ನಾಲೆಗಳಲ್ಲಿ ಗಿಡಘಂಟಿಗಳು ಬೆಳೆದು ಕಸ ಕಟ್ಟಿಗಳಿಂದ ತುಂಬಿ ರೋಗ–ರುಜಿನಗಳ ಆಗರ ಆಗಿರುವ ಬಗ್ಗೆ ಶಹಬಾದ್ ಪಟ್ಟಣದ ನಿವಾಸಿಗಳು ಹಲವಾರು ಬಾರಿ ಹಳ್ಳ ನಾಲೆಗಳನ್ನು ಸ್ವಚ್ಛಗೊಳಿಸುವಂತೆ ಮುಷ್ಕರ ಹಾಗೂ ಧರಣಿ ಕೈಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸಂಪೂರ್ಣ ವಿವರ ನೀಡುವುದು ;

(ಆ) ಒಂದು ಕಾಲದಲ್ಲಿ ಶಹಬಾದ್ ಪಟ್ಟಣವು ಕೈಗಾರಿಕಾ ಕೇಂದ್ರವಾಗಿದ್ದು ಪಟ್ಟಣದ ಮಧ್ಯದಲ್ಲಿ ಹರಿಯುವ ನಾಲಾ ಸ್ವಚ್ಛವಾಗಿದ್ದು, ಇತ್ತೀಚಿನ ವರ್ಷಗಳಲ್ಲಿ ಕಲುಷಿತಗೊಂಡು ಹಾಗೂ ಪರಿಸರ ಮಾಲಿನ್ಯಗೊಂಡು ರೋಗ ರುಜಿನಗಳ ತಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸಂಪೂರ್ಣ ವಿವರ ನೀಡುವುದು ;

(ಇ) ಈ ನಿಟ್ಟಿನಲ್ಲಿ ಶಹಬಾದ್ ಪಟ್ಟಣದ ಹೂಳನ್ನು ತೆಗೆದು ಸ್ವಚ್ಛಗೊಳಿಸಲು ಸರ್ಕಾರ ಮುಂದಾಗುವುದೆ? (ಇದ್ದರೆ, ಸಂಪೂರ್ಣ ವಿವರ ನೀಡುವುದು)

## ಜೆಸ್ಕಾಂ ಸಂಸ್ಥೆಯು ಖರೀದಿ ಮಾಡಿರುವ ವಿದ್ಯುತ್ ಪ್ರಮಾಣದ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ):–**

೧೫೯೭ (೧೭೦೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪, ೨೦೧೪–೧೫ ಮತ್ತು ೨೦೧೫–೧೬ನೇ ಸಾಲುಗಳಲ್ಲಿ ಜೆಸ್ಕಾಂ ಸಂಸ್ಥೆಯು ಯಾವ ಯಾವ ಸೌರ ವಿದ್ಯುತ್ ಶಕ್ತಿ ಘಟಕಗಳಿಂದ ವಿದ್ಯುತ್ ಖರೀದಿಸಿದೆ; (ಘಟಕವಾರು, ವರ್ಷವಾರು ವಿದ್ಯುತ್ ಪ್ರಮಾಣವಾರು, ಕರಾರು ಒಪ್ಪಂದದ ಪ್ರತಿಯೊಂದಿಗೆ ಮಾಹಿತಿ ನೀಡುವುದು)

(ಆ) ಜೆಸ್ಕಾಂ ವತಿಯಿಂದ ೨೦೧೩–೧೪, ೨೦೧೪–೧೫ ಮತ್ತು ೨೦೧೫–೧೬ನೇ ಸಾಲುಗಳಲ್ಲಿ ಸೌರ ವಿದ್ಯುತ್ ಘಟಕಗಳಿಂದ ಖರೀದಿಸಿದ ವಿದ್ಯುತ್‌ಗೆ ಪ್ರತಿ ಯುನಿಟ್‌ಗೆ ನಿಗಧಿಪಡಿಸಿದ ದರ ಎಷ್ಟು; (ಘಟಕವಾರು, ವರ್ಷವಾರು, ವಿದ್ಯುತ್ ಪ್ರಮಾಣವಾರು ಮಾಹಿತಿ ನೀಡುವುದು)

(ಇ) ಖರೀದಿಸಲಾದ ವಿದ್ಯುತ್‌ಗಾಗಿ ವಿದ್ಯುತ್ ಘಟಕಗಳಿಗೆ ಪಾವತಿಸಲಾದ ಮೊತ್ತ ಎಷ್ಟು; (ಘಟಕವಾರು, ವರ್ಷವಾರು, ವಿದ್ಯುತ್ ಪ್ರಮಾಣವಾರು ಮಾಹಿತಿ ನೀಡುವುದು)

(ಈ) ವಿದ್ಯುತ್ ಖರೀದಿಯಲ್ಲಿ ಆದ ಒಪ್ಪಂದಕ್ಕಿಂತ ಹೆಚ್ಚಿಗೆ ಹಣ ಪಾವತಿಸಿರುವುದು ನಿಜವೇ; ಹಾಗಿದ್ದರೆ, ಹೆಚ್ಚುವರಿಯಾಗಿ ಪಾವತಿಸಲಾದ ಮೊತ್ತ ಎಷ್ಟು; ಹೆಚ್ಚುವರಿ ಪಾವತಿಸಲಾದ ಮೊತ್ತವನ್ನು ಮರು ಪಾವತಿಸಲು ಸರ್ಕಾರ ಕ್ರಮಕೈಗೊಳ್ಳುವುದೇ? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕದ ಆರು ಜಿಲ್ಲೆಗಳಲ್ಲಿ ಬಿ.ಟಿ ಹತ್ತಿಗೆ ಗುಲಾಬಿ ಕಾಯಿ ಕೊರೆತ ರೋಗದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೫೭೮ (೧೭೦೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕದ ಆರು ಜಿಲ್ಲೆಗಳಲ್ಲಿ ಕಳೆದ ಹಂಗಾಮಿನಲ್ಲಿ ಬಿತ್ತನೆಯಾದ ಬಿ.ಟಿ ಹತ್ತಿಯ ಪ್ರಮಾಣ ಎಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಬಿ.ಟಿ ಹತ್ತಿಗೆ ಗುಲಾಬಿ ಕಾಯಿ ಕೊರೆತ ರೋಗ ತಗುಲಿ ಸಂಪೂರ್ಣವಾಗಿ ನಾಶವಾಗಿ ರೈತರು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದರೆ, ಜಿಲ್ಲಾವಾರು, ಎಕರೆವಾರು ಮಾಹಿತಿ ನೀಡುವುದು;

(ಇ) ಬಿ.ಟಿ ಹತ್ತಿ ಬೀಜಗಳು ಗುಲಾಬಿ ಕಾಯಿ ಕೊರೆತ ರೋಗದಿಂದ ಮುಕ್ತವಾಗಿರುತ್ತದೆ ಎಂದು ಕಂಪನಿಗಳು ಧೃಡೀಕರಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಕಂಪನಿಗಳವಾರು ಮಾರಾಟ ಮಾಡಲಾದ ಬೀಜಗಳ ಪ್ರಮಾಣ ಸಹಿತ ಮಾಹಿತಿ ನೀಡುವುದು ;

(ಈ) ಕಳಪೆ ಬಿ.ಟಿ ಹತ್ತಿ ಬೀಜ ಮಾರಾಟ ಮಾಡಿದಂತಹ ಕಂಪನಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಕಂಪನಿವಾರು ವಿವರ ನೀಡುವುದು)

(ಉ) ರೈತರಿಗೆ ಆದಂತಹ ಹಾನಿಗೆ ಪರಿಹಾರ ನೀಡುವಲ್ಲಿ ಸರ್ಕಾರ ಮುಂದಾಗುವುದೇ? (ಮಾಹಿತಿ ನೀಡುವುದು)

## ಲೋಕೋಪಯೋಗಿ ಕಾಮಗಾರಿಗಳಿಗೆ ಅನುದಾನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫ (೧೭೦೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಮಂಡ್ಯ ಜಿಲ್ಲೆಯ ಲೋಕೋಪಯೋಗಿ ಇಲಾಖೆಗೆ ಯಾವ ಯಾವ ಶೀರ್ಷಿಕೆಯಡಿ ಎಷ್ಟೆಷ್ಟು ಹಣ ಬಂದಿದೆ; (ಕಳೆದ ೩ ವರ್ಷಗಳ ವಿವರ ನೀಡುವುದು)

(ಆ) ಯಾವ ಯಾವ ಶೀರ್ಷಿಕೆಯಡಿ ಎಷ್ಟೆಷ್ಟು ಹಣವನ್ನು ಹಂಚಿಕೆ ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಆ ಹಣವನ್ನು ಯಾವ ಯಾವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದೆ ;

(ಈ) ಸದರಿ ಕಾಮಗಾರಿಗಳ ಪೈಕಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ಕಾಮಗಾರಿ ವಹಿಸಿಕೊಂಡ ಕಂಟ್ರಾಕ್ಟರುಗಳ ಹೆಸರು, ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಉ) ಈ ಕಾಮಗಾರಿಗಳ ಗುಣಮಟ್ಟದಲ್ಲಿ ಲೋಪದೋಷ ಕಂಡುಬಂದಿದೆಯೇ, ಬಂದಿದ್ದಲ್ಲಿ, ಯಾವ ಕ್ರಮ ಜರುಗಿಸಲಾಗಿದೆ? (ವಿವರ ನೀಡುವುದು)

## ಮಂಡ್ಯ ಜಿಲ್ಲೆಯ ಕಬ್ಬು ಬೆಳೆಗಾರರ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦೦ (೧೭೭೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಕ್ಕರೆ ನಾಡು ಮಂಡ್ಯದಲ್ಲಿ ಇರುವ ಕಬ್ಬಿನ ಕಾರ್ಖಾನೆಗಳ ಸಂಖ್ಯೆ ಎಷ್ಟು; ಇದರಲ್ಲಿ ಸರ್ಕಾರಿ ಹಾಗೂ ಖಾಸಗಿ ಸಕ್ಕರೆ ಕಾರ್ಖಾನೆಗಳೆಷ್ಟು; (ಪೂರ್ಣ ವಿವರ ನೀಡುವುದು)

(ಆ) ಸದರಿ ಕಾರ್ಖಾನೆಗಳಲ್ಲಿ ದಿನಂಪ್ರತಿ ಕಬ್ಬು ಅರೆಯುವ ಸಾಮರ್ಥ್ಯ ಎಷ್ಟು ;

(ಇ) ಕಬ್ಬು ಅರೆಯುವ ಸಾಮರ್ಥ್ಯಕ್ಕಿಂತ ಹೆಚ್ಚಾಗಿ ಕಬ್ಬು ಬೆಳೆಯುತ್ತಿದ್ದು ಸಕಾಲದಲ್ಲಿ ಕಟಾವು ಮಾಡಲಾಗದ ಕಬ್ಬು ಒಣಗಿ ರೈತರು ಸಂಕಷ್ಟಕೊಳ್ಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ ಇದನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಉ) ಕಬ್ಬಿನ ಸಿಪ್ಪೆಯನ್ನು ಸದುಪಯೋಗಪಡಿಸಿಕೊಳ್ಳಲು ಸರ್ಕಾರ ಹಾಕಿ ಕೊಂಡಿರುವ ಕ್ರಮವೇನು; (ವಿವರ ನೀಡುವುದು)

(ಊ) ಕಬ್ಬಿನ ಸಿಪ್ಪೆಯ ಸದುಪಯೋಗದಿಂದ ರೈತರಿಗೆ ಹೆಚ್ಚಿನ ಲಾಭವಾಗುವುದಿಲ್ಲವೆ?

## ಹೈನುಗಾರಿಕೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦೧ (೧೭೧೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಹೈನುಗಾರಿಕೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು; (ವಿವರ ನೀಡುವುದು)

(ಆ) ಹೈನುಗಾರಿಕೆಗೆ ಸರ್ಕಾರ ನೀಡುತ್ತಿರುವ ಸೌಲಭ್ಯವೇನು; (ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ದಿನ ಪ್ರತಿ ಉತ್ಪತ್ತಿಯಾಗುವ ಹಾಲಿನ ಪ್ರಮಾಣವೆಷ್ಟು; ಹಾಲಿನ ಸರಬರಾಜಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಹೈನುಗಾರಿಕೆ ಪ್ರಾರಂಭಿಸಲು ಸರ್ಕಾರ ನೀಡುತ್ತಿರುವ ಪ್ರೋತ್ಸಾಹ ಧನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಮಂಡ್ಯ ಜಿಲ್ಲೆಯಲ್ಲಿ ಹಾಲಿನ ಉತ್ಪನ್ನ ಘಟಕ ಸ್ಥಾಪಿಸಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ ವಿವರ ನೀಡುವುದು ?

## ಭತ್ತದ ಬೆಳೆ ಬಗ್ಗೆ

**ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦೨ (೧೭೧೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಪ್ರತಿವರ್ಷ ಎಷ್ಟು ಕ್ವಿಂಟಲ್ ಭತ್ತ ಬೆಳೆಯಲಾಗುವುದು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಭತ್ತದ ಬೆಳೆಗಾರರಿಗೆ ಸರ್ಕಾರ ನೀಡಿರುವ ಸೌವಲತ್ತು, ಸೌಲಭ್ಯವೇನು; (ವಿವರ ನೀಡುವುದು)

(ಇ) ಪ್ರಸ್ತಕ ಸಾಲಿನಲ್ಲಿ ರೈತರಿಂದ ಮಾರಲ್ಪಟ್ಟ ಭತ್ತದ ಪ್ರಮಾಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ರೈತರ ಕಡಿಮೆ ಬೆಲೆಯಲ್ಲಿ ಭತ್ತವನ್ನು ಮಾರಾಟ ಮಾಡುತ್ತಿದ್ದರೂ ಸರ್ಕಾರದಿಂದ ಬೆಂಬಲ ಬೆಲೆ ದೊರಕಿದೆಯೇ; ಹಾಗಿದ್ದಲ್ಲಿ ವಿವರ ನೀಡುವುದು;

(ಉ) ಮಂಡ್ಯದಲ್ಲಿ ಉತ್ತಮ ಭತ್ತದ ಬೆಳೆಗೆ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

## ತೋಟಗಾರಿಕೆ ಉತ್ಪನ್ನಗಳ ಶೇಖರಣೆ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦೩ (೧೬೪೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೧–೧೨ನೇ ಸಾಲಿನ ಆರ್.ಕೆ.ವಿ.ವೈ. ಯೋಜನೆಯಡಿ ಜಿಲ್ಲಾ ಹಾಪ್‌ಕಾಮ್ಸ್, ವಿಜಯಪುರರವರ ಮುಖಾಂತರ ಒಂದು ಶೀತಲಗೃಹ ನಿರ್ಮಾಣ ಮಾಡಲು ರೂ.೨೨೫.೦೦ ಲಕ್ಷ ಮಂಜೂರಾಗಿದೆಯೇ, ಅನುದಾನವನ್ನು ಬಿಡುಗಡೆ ಆಗಿದ್ದರೆ ಶೀತಲಗೃಹದ ಕಾಮಗಾರಿ ಯಾವಾಗ ಪ್ರಾರಂಭವಾಯಿತು, ಅದರ ಗುತ್ತಿಗೆದಾರರು ಯಾರು, ಸದರಿ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲಾಗುವುದು;

(ಆ) ಕಾಮಗಾರಿ ಪ್ರಾರಂಭವಾಗಿದೆಯೇ, ಆಗದಿದ್ದರೆ, ಇದಕ್ಕೆ ಕಾರಣವೇನು, ಮತ್ತು ಇದಕ್ಕೆ ಹೊಣೆಗಾರರು ಯಾರು, ಹೊಣೆಗಾರರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಜಿಲ್ಲೆಯ ತೋಟಗಾರಿಕೆ ಉತ್ಪನ್ನಗಳ ಶೇಖರಣೆಗೆ ಎಷ್ಟು ಸಾಮರ್ಥ್ಯ ಶೀತಲಗೃಹದ ಅವಶ್ಯಕತೆ ಇದೆ; ನಿರ್ಮಾಣ ಮಾಡುವ ಶೀತಲಗೃಹದ ಸಾಮರ್ಥ್ಯ ಎಷ್ಟು ?

## ಮತದಾನದ ಹಕ್ಕು ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦೪ (೧೬೫೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಯಾವ ಯಾವ ಸ್ಥಳೀಯ ಸಂಸ್ಥೆಗಳಿಗೆ ಎಷ್ಟು ಜನರನ್ನು ನಾಮನಿರ್ದೇಶನ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ನಾಮನಿರ್ದೇಶಿತ ಸದಸ್ಯರಿಗೆ ನೀಡಲಾದ ಅಧಿಕಾರಗಳೇನು, ಅವರಿಗೆ ಮತದಾನದ ಹಕ್ಕನ್ನು ನೀಡಲಾಗಿದೆಯೇ, ನೀಡಿದ್ದಲ್ಲಿ ಅದು ಸೂಕ್ತವೇ;

(ಇ) ನಾಮನಿರ್ದೇಶಿತ ಸದಸ್ಯರಿಗೆ ಮತದಾನದ ಹಕ್ಕು ನೀಡುವುದರಿಂದ ಪ್ರಜಾಪ್ರಭುತ್ವ ವ್ಯವಸ್ಥೆಯು ಅರ್ಥಹೀನವಾಗಿ ಪ್ರಜಾ ತೀರ್ಮಾನಕ್ಕೆ ವಿರುದ್ಧವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದರೆ, ಸರ್ಕಾರವು ಪುನರ್ ಪರಿಶೀಲಿಸುವುದೇ? (ವಿವರವಾದ ಮಾಹಿತಿ ನೀಡುವುದು)

## ಗ್ರಾಮೀಣ ಪ್ರದೇಶದ ರಸ್ತೆ ದುರಸ್ಥಿ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦೫ (೧೭೧೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಗ್ರಾಮೀಣ ಪ್ರದೇಶದ ರಸ್ತೆಗಳು ಹದಗೆಟ್ಟು ಸೇತುವೆಗಳು ಶಿಥಿಲಗೊಂಡು ಜನ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ವಿಜಯಪುರ, ಬಾಗಲಕೋಟೆ ಜಿಲ್ಲೆಯಲ್ಲಿನ ರಸ್ತೆಗಳ ಅಭಿವೃದ್ಧಿಗಾಗಿ ಲೋಕೋಪಯೋಗಿ ಇಲಾಖೆಯಿಂದ ಮಂಜೂರಾದ ಅನುದಾನವೆಷ್ಟು; ವಿವರವಾದ ಮಾಹಿತಿ ನೀಡುವುದು ;

(ಇ) ಈ ಜಿಲ್ಲೆಗಳಲ್ಲಿ ಅಭಿವೃದ್ಧಿ ಪಡಿಸಬೇಕಾದ ರಸ್ತೆಗಳು ಎಷ್ಟು; ಅಭಿವೃದ್ಧಿಯಾದ ರಸ್ತೆಗಳು ಎಷ್ಟು; ಒಟ್ಟು ಎಷ್ಟು ಸೇತುವೆಗಳು ಮತ್ತು ರಸ್ತೆಗಳು ಶಿಥಿಲಗೊಂಡು ಈವರೆಗೂ ದುರಸ್ಥಿಯಾಗದೆ ಉಳಿದಿವೆ ಮತ್ತು ದುರಸ್ಥಿಯಾಗದೆ ಇರುವುದಕ್ಕೆ ಕಾರಣವೇನು? (ಸಂಪೂರ್ಣವಾದ ಮಾಹಿತಿ ನೀಡುವುದು)

## ನಾಲ್ಕು ಪಥ ರಸ್ತೆಯನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦೬ (೧೭೧೭) ಮಾನ್ಯ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿ ೫೦ ವಿಜಯಪುರದಿಂದ ಸೋಲಾಪುರದವರೆಗೆ ೪ ಪಥ ರಸ್ತೆಯನ್ನಾಗಿ ಪರಿವರ್ತಿಸುವ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

(ಆ) ಈ ಕಾಮಗಾರಿ ಇಷ್ಟು ವಿಳಂಭವಾಗಿರುವುದಕ್ಕೆ ಕಾರಣವೇನು ;

(ಇ) ಈ ರಸ್ತೆ ನಿರ್ಮಾಣಕ್ಕೆ ಎಷ್ಟು ಹಣ ನಿಗಧಿಪಡಿಸಲಾಗಿದೆ ;

(ಈ) ಕೇಂದ್ರ ಸರ್ಕಾರವು ತನ್ನ ಪಾಲಿನ ಹಣವನ್ನು ಬಿಡುಗಡೆಗೊಳಿಸಿದೆಯೇ; (ವಿವರ ನೀಡುವುದು)

(ಉ) ಹೊಸಪೇಟೆಯಿಂದ ಚಿತ್ರದುರ್ಗದ ೪ ಪಥ ರಸ್ತೆ ಕಾಮಗಾರಿಯು ಯಾವ ಹಂತದಲ್ಲಿದೆ; ಈ ರಸ್ತೆ ಕಾಮಗಾರಿಯು ಪೂರ್ಣಗೊಳ್ಳುವುದು ಯಾವಾಗ ಈ ಕಾಮಗಾರಿಗೆ ನಿಗಧಿಪಡಿಸಲಾದ ಹಣವೆಷ್ಟು? (ವಿವರವಾದ ಮಾಹಿತಿ ನೀಡುವುದು)

## R.T.P.S ನ C.H.P-2 ವಿಭಾಗ ಗುತ್ತಿಗೆ ಕಾರ್ಮಿಕರ ನೇಮಕಾತಿ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೦೭ (೧೬೬೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) R.T.P.S C.H. P-2 ನಲ್ಲಿ ಎಷ್ಟು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ ;

(ಆ) R.T.P.S C.H. P-2 ನಲ್ಲಿ ೧೯೯ ಗುತ್ತಿಗೆ ಕಾರ್ಮಿಕರ ಸೇವಾ ಖಾಯಂ ಮಾಡುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) C.H. P-1-193 ಗುತ್ತಿಗೆ ಕಾರ್ಮಿಕರನ್ನು ಸರ್ಕಾರ ಖಾಯಂಗೊಳಿಸಿದ ವಿವರ ಒದಗಿಸುವುದು; (೯೯–೨೦೦೦)

(ಈ) 2013-14 ನೇ ಸಾಲಿನಲ್ಲಿ ೯ (T:M-1) ವಿಭಾಗದಲ್ಲಿ ಯಾವ ನಿಯಮದ ಆಧಾರದ ಮೇಲೆ ಖಾಯಂಗೊಳಿಸಿದ್ದೀರಿ ;

(ಉ) C.H. P-2- ವಿಭಾಗದ ೧೯೯ ಗುತ್ತಿಗೆ ಕಾರ್ಮಿಕರನ್ನು ಸರಕಾರ ಖಾಯಂಗೊಳಿಸದಿರುವುದಕ್ಕೆ ಕಾರಣಗಳೇನು ?

## ಗಂಗಾ ಕಲ್ಯಾಣ ಬೋರ್‌ವೆಲ್‌ಗಳ ವಿದ್ಯುತ್ ಸಂಪರ್ಕದ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೦೮ (೧೬೬೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯಲ್ಲಿ ೨೦೧೩–೧೪, ೨೦೧೪–೧೫ ಮತ್ತು ೨೦೧೫–೧೬ ರಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆದ ಎಷ್ಟು ಬೋರ್‌ವೆಲ್‌ಗಳಿಗೆ (SC ಮತ್ತು ST) ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು ಮತ್ತು ಫಲಾನುಭವಿಗಳವಾರು ವಿವರ ನೀಡುವುದು)

(ಆ) ಗಂಗಾ ಕಲ್ಯಾಣ ಯೋಜನೆಯಲ್ಲಿ (SC ಮತ್ತು ST) ಕೊರೆಸಲಾದ ಬಾಕಿ ಬೋರ್‌ವೆಲ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಯಾವಾಗ ಕಲ್ಪಿಸಲಾಗುವುದು; (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರ ನೀಡುವುದು)

## Y.T.P.S ನಿಂದ ಪರಿಸರ ಮಾಲಿನ್ಯ ಮಾರ್ಗ ಸೂಚಿಗಳ ಉಲ್ಲಂಘನೆ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೦೯ (೧೬೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿ ಇರುವ Y.T.P.S ನಲ್ಲಿರುವ ಘಟಕಗಳಲ್ಲಿ ಪರಿಸರ ನಿಯಂತ್ರಣ ಮಂಡಳಿ ಸೂಚಿಸಿರುವ ಮಾರ್ಗ ಸೂಚಿಗಳನ್ನು ಉಲ್ಲಂಘಿಸಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

# ರಾಯಚೂರು ತಾಲ್ಲೂಕಿನ ರೈತರ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಸಂಪರ್ಕ ಕಲ್ಲಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೧೦ (೧೬೭೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ತಾಲ್ಲೂಕಿನಲ್ಲಿ ಕರ್ನಾಟಕ ವಿದ್ಯುತ್ ನಿಗಮ (ಕೆ.ಪಿ.ಸಿ)ವತಿಯಿಂದ ನಿರ್ಮಿಸಿರುವ ಎಂಟು ಘಟಕಗಳ (ಆರ್.ಟಿ.ಪಿ.ಎಸ್/ವೈ.ಟಿ.ಪಿ.ಎಸ್) ಕಾಮಗಾರಿಗಳು ಪ್ರಗತಿಯಲ್ಲಿದ್ದು, ೩,೨೦೦ ಮೆಗಾವ್ಯಾಟ್ ವಿದ್ಯುತ್ ಉತ್ಪಾದನಾ ಸಾಮರ್ಥ್ಯ ಈ ತಾಲ್ಲೂಕಿನಿಂದ ಆಗುತ್ತಿದ್ದು, ಈ ದಿಶೆಯಲ್ಲಿ ಸಾವಿರಾರು ಎಕರೆ ಭೂಮಿಯನ್ನು ರೈತರಿಂದ ಪಡೆದಿರುವುದು ಹಾಗೂ ಈ ಯೋಜನೆಯಿಂದ ಸಾಕಷ್ಟು ಪರಿಸರ ಮಾಲಿನ್ಯ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ ಭಾಗದ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ಕೃಷ್ಣಾ ಮತ್ತು ತುಂಗಭದ್ರ ನದಿಗಳ ಆಧಾರದ ಮೇಲೆ ರೈತರು ಅಳವಡಿಸಿಕೊಂಡಿರುವ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಹಾಗೂ ಮಾನ್ವಿ ತಾಲ್ಲೂಕಿನಲ್ಲಿ ವಿವಿಧ ಹಂತಗಳಲ್ಲಿ ಇರುವ ೧೧೦/೧೧ ಕೆ.ವಿ ಸಬ್‌ಸ್ಟೇಷನ್‌ಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮಾನ್ವಿ, ಸಿರಿವಾರ, ಕವಿತಾಳ ಪಟ್ಟಣ ಪಂಚಾಯತಿಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೧೧ (೧೬೭೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ಪಟ್ಟಣಕ್ಕೆ ಕುಡಿಯುವ ನೀರಿಗಾಗಿ ನಿರ್ಮಿಸಿರುವ ಕೆರೆ ನಿರ್ವಾಣ ಯೋಜನೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ನೂತನ ಪಟ್ಟಣ ಪಂಚಾಯಿತಗಳಾದ ಸಿರವಾರ, ಕವಿತಾಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ಎಸ್.ಹೆಚ್–೨೦ ಮತ್ತು ಎಸ್.ಹೆಚ್–೨೩ ರಾಜ್ಯ ಹೆದ್ದಾರಿಗಳನ್ನು ರಾಷ್ಟೀಯ ಹೆದ್ದಾರಿಗಳಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೧೨ (೧೬೮೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು (ಬಾಜಿ) ಬೆಳಗಾವಿ ಎಸ್.ಹೆಚ್–೨೦ ಹಾಗೂ ಕಲ್ಮಲಾ ಕ್ರಾಸ್‌ನಿಂದ ಬುದಿಗುಂಪಾ ಎಸ್.ಹೆಚ್–೨೩ ರಸ್ತೆಗಳು ರಾಷ್ಟೀಯ ಹೆದ್ದಾರಿ (ಎನ್.ಹೆಚ್) ಗಳಾಗಿ ಪರಿವರ್ತನೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೬–೧೭ ರಲ್ಲಿ ರಾಯಚೂರು ಜಿಲ್ಲೆಯಲ್ಲಿ ಎಸ್.ಹೆಚ್.ಡಿ.ಪಿ ಯೋಜನೆ ಅಡಿಯಲ್ಲಿ ಬರುವ ರಸ್ತೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಮಾನ್ವಿ ತಾಲ್ಲೂಕಿನಲ್ಲಿ ಬರುವ ಮುಸ್ತುರು ಗ್ರಾಮದ ಹತ್ತಿರ ಸೇತುವೆ ನಿರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಯಚೂರಿನ ಕೃಷಿ ವಿಶ್ವವಿದ್ಯಾಲಯಕ್ಕೆ ಹೆಚ್ಚಿನ ಅನುದಾನ ನೀಡಿ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೧೩ (೧೬೮೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿರುವ ಕೃಷಿ ವಿಶ್ವವಿದ್ಯಾಲಯವನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೫–೧೬ನೇ ಸಾಲಿನಲ್ಲಿ ಸದರಿ ಕೃಷಿ ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಅನುಕಂಪದ ಆಧಾರದ ನೇಮಕಾತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೬೧೪ (೧೭೧೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕ ಉದ್ಯಮಗಳಲ್ಲಿ ಅನುಕಂಪ ಆಧಾರಿತ ನೇಮಕಾತಿಗಳನ್ನು ಸ್ಥಗಿತಗೊಳಿಸಿರುವುದು ನಿಜವೇ ;

(ಆ) ಹಾಗಾದರೆ ಸ್ಥಗಿತಗೊಳಿಸಲು ಕಾರಣಗಳೇನು ;

(ಇ) ಇದರಿಂದ ಮೃತರ ಕುಟುಂಬಕ್ಕೆ ಸರ್ಕಾರದಿಂದ ಯಾವ ರೀತಿ ಪರಿಹಾರ ನೀಡಿ ನ್ಯಾಯ ಒದಗಿಸಿದಂತಾಗುವುದು ;

(ಈ) ದಿನಾಂಕ:೦೧.೦೬.೨೦೧೬ಕ್ಕೆ ಎಷ್ಟು ಅನುಕಂಪ ಆಧಾರಿತ ನೇಮಕಾತಿ ಅರ್ಜಿಗಳು ಬಾಕಿ ಇವೆ; ಉದ್ದಿಮೆವಾರು ವಿವರವಾಗಿ ಅರ್ಜಿ ಸಲ್ಲಿಸಿದ ದಿನಾಂಕ: ಮೃತ ನೌಕರನ ಹೆಸರು, ಅರ್ಜಿ ಸಲ್ಲಿಸಿದವರ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು ?

## ರೂಫ್ ಟಾಪ್ ಸೋಲಾರ್ ಯೋಜನೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೬೧೫ (೧೭೧೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೋಲಾರ್‌ನಿಂದ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಯಾವಾಗಿನಿಂದ ಜಾರಿಗೆ ಬಂದಿದೆ ;

(ಆ) ರೈತರ ಜಮೀನಿನಲ್ಲಿ, ಮೇಲ್ಛಾವಣಿ (ರೂಫ್ ಟಾಪ್) ಸೋಲಾರ್ ಯೋಜನೆಯಡಿ ತುಮಕೂರು ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಎಷ್ಟು ರೈತರಿಗೆ ಪಿ.ಪಿ.ಎ ನೀಡಲಾಗಿದೆ ;

(ಇ) ಈ ಮೂರು ಜಿಲ್ಲೆಗಳಲ್ಲಿ ಪಿ.ಪಿ.ಎ. ಪಡೆದ ರೈತರ ಹೆಸರು, ವಿಳಾಸ, ಸರ್ವೆ ನಂ. ಪರಿಮಾಣಗಳನ್ನು ಸಬ್–ಸ್ಟೇಷನ್ ವಾರು, ತಾಲ್ಲೂಕುವಾರು ವಿವರವಾಗಿ ಮಾಹಿತಿ ನೀಡುವುದು ?

## ಕಳಪೆ ಬೀಜ–ಗೊಬ್ಬರ ಮಾರಾಟ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೧೬ (೧೬೩೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ರೈತರಿಗೆ ನಕಲಿ (ಕಳಪೆ) ಬೀಜ ಮತ್ತು ರಸಗೊಬ್ಬರಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಕಳಪೆ ಗುಣಮಟ್ಟದ ಬೀಜ ಮತ್ತು ರಸಗೊಬ್ಬರವನ್ನು ಮಾರಾಟ ಮಾಡುತ್ತಿರುವುದನ್ನು ಸರ್ಕಾರ ಪತ್ತೆ ಹಚ್ಚಿದೆಯೇ ;

(ಇ) ಇಂತಹ ಮಾರಾಟಗಾರರ ಮೇಲೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಪರಿಶಿಷ್ಟ ಜಾತಿ/ವರ್ಗಗಳ ರೈತರಿಗೆ ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೧೭ (೧೬೪೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರೈತರುಗಳು ವಿದ್ಯುತ್ ಕೊರತೆಯ ಕಾರಣದಿಂದ ನೀರಾವರಿ ಸಮಸ್ಯೆಗೆ ಒಳಗಾಗಿ ತೊಂದರೆಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವರ್ಗಗಳ ರೈತರಿಗೆ ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸಿ ಅನುಕೂಲ ಮಾಡಿಕೊಡಲು ಸರ್ಕಾರ ಯೋಚನೆ ಮಾಡುತ್ತಿದೆಯೇ ;

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಜನರಿಗೆ ಈ ಸೌರಶಕ್ತಿ ಸೌಲಭ್ಯವನ್ನು ಎಷ್ಟು ದಿನಗಳಲ್ಲಿ ಒದಗಿಸಲಾಗುವುದು ?

## ಕೈತೋಟ ಮಾಡಲು ಪ್ರೋತ್ಸಾಹ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೧೮ (೧೬೪೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕರು ತಮ್ಮ ಮನೆಗಳ ಮುಂದೆ ಅಥವಾ ಹಿಂದೆ/ ಹಾಗೂ ಟೆರೇಸ್‌ಗಳಲ್ಲಿ ಕೈತೋಟ ಮಾಡಿ ತರಕಾರಿ ಮತ್ತು ಹೂವುಗಳನ್ನು ಬೆಳೆಸಲು ಪ್ರೋತ್ಸಾಹ ನೀಡಲು ಇಲಾಖೆ ಏನಾದರೂ ಕಾರ್ಯಕ್ರಮ ಹಾಕಿಕೊಂಡಿದೆಯೇ ;

(ಆ) ಈ ದಿಸೆಯಲ್ಲಿ ಯಾವ ರೀತಿಯ ನೆರವನ್ನು ಇಲಾಖೆ ನೀಡುತ್ತದೆ;

(ಇ) ನಾಗರಿಕರಿಗೆ ಉಚಿತವಾಗಿ ಬೀಜ, ಗೊಬ್ಬರ ನೀಡಲು ಹಾಗೂ ಸಿಬ್ಬಂದಿಗಳಿಂದ ನೆರವು ನೀಡಲು ಇಲಾಖೆ ಪ್ರಯತ್ನಿಸುತ್ತದೆಯೇ?

## ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೧೬೧೯ (೧೭೫೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಗ್ರಾಮಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರದ ಮುಂದೆ ಪ್ರಸ್ತಾವವಿರುತ್ತದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ವಾರ್ಷಿಕವಾಗಿ ನೀಡಲಾಗುತ್ತಿರುವ ಅನುದಾನ ಎಷ್ಟು ;

(ಇ) ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳ ಸದಸ್ಯರುಗಳಿಗೆ ಹಾಲಿ ನೀಡುತ್ತಿರುವ ಗೌರವಧನ ಎಷ್ಟು ; ಗೌರವಧನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಈ) ರಾಜ್ಯದಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ?

## ಅಡಿಕೆ ಬೆಳೆಗಾರರ ಮಂಡಳಿ ರಚಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೧೬೨೦ (೧೭೫೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಅಡಿಕೆ ಬೆಳೆಗಾರರ ಮಂಡಳಿ ರಚಿಸಬೇಕೆಂಬ ಪ್ರಸ್ತಾವನೆ ಯಾವ ಹಂತದಲ್ಲಿದೆ, ವಿಳಂಬಗೊಳ್ಳಲು ಕಾರಣಗಳೇನು ;

(ಆ) ಅಡಿಕೆ ಬೆಳೆಯ ಬೆಲೆ ಕುಸಿತಗೊಳ್ಳಲು ಕಾರಣಗಳೇನು, ಬೇಡಿಕೆಯನ್ನು ಹೆಚ್ಚಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳಾವುವು ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಹೆಕ್ಟೇರ್‌ಗಳಲ್ಲಿ ಅಡಿಕೆ ಬೆಳೆಸಲಾಗುತ್ತದೆ, ಬೆಳೆಗಾರರಿಗೆ ಪ್ರೋತ್ಸಾಹಿಸಲು ಇಲಾಖೆಯ ಮುಂದಿರುವ ಪ್ರಸ್ತಾವನೆಗಳಾವುವು ; (ವಿವರ ನೀಡುವುದು)

(ಈ) ಅಡಿಕೆ ಬೆಳೆಗಾರರನ್ನು ಸಂಕಷ್ಟದಿಂದ ಪಾರು ಮಾಡಲು ಕೇಂದ್ರ ಸರ್ಕಾರ ಪರಿಹಾರ ಧನ ಒದಗಿಸಿದೆಯೇ; ಒದಗಿಸಿದ್ದಲ್ಲಿ, ವಿವರ ನೀಡುವುದು ?

## ಶಿರಾಡಿ ಘಾಟ್ ದುರಸ್ಥಿ ೨ನೇ ಹಂತದ ಕಾಮಗಾರಿ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೬೨೧ (೧೭೫೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿರಾಡಿ ಘಾಟ್ ದುರಸ್ಥಿ ೨ನೇ ಹಂತದ ಕಾಮಗಾರಿ ಪ್ರಾರಂಭಗೊಳ್ಳದೇ ಇರಲು ಕಾರಣಗಳೇನು, ಈ ಕಾಮಗಾರಿ ಎಂದು ಪ್ರಾರಂಭಗೊಳ್ಳುವುದು, ವಿಳಂಬಕ್ಕೆ ಕಾರಣಗಳೇನು ;

(ಆ) ಶಿರಾಡಿ ಘಾಟ್‌ನಲ್ಲಿ ಸುರಂಗ ಮಾರ್ಗ ರಚಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ, ಎಷ್ಟು ಕಿಲೋಮೀಟರ್ ಸುರಂಗ ಮಾರ್ಗವನ್ನು ರಚಿಸಲಾಗುವುದು ; ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಇ) ಶಿರಾಡಿ ಘಾಟ್‌ಗೆ ಪರ್ಯಾಯ ಮಾರ್ಗವಾಗಿ ಯಾವ ಮಾರ್ಗ ಗುರುತಿಸಲಾಗಿದೆ, ಈ ರಸ್ತೆಗಾಗಿ ಮೀಸಲಿಟ್ಟ ಅನುದಾನ ಎಷ್ಟು ; (ವಿವರ ನೀಡುವುದು)

(ಈ) ಬಿಸಿಲೇ ಘಾಟಿ ರಸ್ತೆಯನ್ನು ಅಭಿವೃದ್ಧಿಗೊಳಿಸಲು ಇಲಾಖೆ ಕೈಗೊಂಡಿರುವ ಕ್ರಮವೇನು ?

## ರಾಜ್ಯದಲ್ಲಿ ಸೋಲಾರ್ ಸೌರಶಕ್ತಿ ಮೇಲ್ಛಾವಣಿ ಘಟಕಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೬೨೨ (೧೭೫೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೋಲಾರ್ ಸೌರಶಕ್ತಿ ಮೇಲ್ಛಾವಣೆ ಘಟಕಗಳಿಗೆ ರಾಜ್ಯ ಸರ್ಕಾರದಿಂದ ಸಿಗುವ ಪ್ರೋತ್ಸಾಹವೇನು, ಪ್ರಸ್ತುತ ಇಲಾಖೆ ಸೌರಶಕ್ತಿ ವಿದ್ಯುತ್‌ಗೆ ಗ್ರಾಹಕರಿಂದ ಯಾವ ದರದಲ್ಲಿ ಖರೀದಿ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಆ) ಸೌರಶಕ್ತಿ ಮೇಲ್ಛಾವಣೆ ಘಟಕಗಳಿಂದ ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಒಟ್ಟು ವಿದ್ಯುತ್ ಎಷ್ಟು ; (ಜಿಲ್ಲಾವಾರು ಅಳವಡಿಸಿದ ಘಟಕಗಳ ವಿವರ ನೀಡುವುದು)

(ಇ) ಸೌರಶಕ್ತಿ ಮೇಲ್ಛಾವಣೆ ಘಟಕಗಳನ್ನು ರಾಜ್ಯದ ಸರ್ಕಾರಿ ಮತ್ತು ಸರ್ಕಾರದ ಅಧೀನ ನಿಗಮ ಮಂಡಳಿಗಳ ಕಟ್ಟಡಗಳ ಮೇಲೆ ಅಳವಡಿಸಲು ಇಲಾಖೆ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಈ) ಸೋಲಾರ್ ವಿದ್ಯುತ್ ಶಕ್ತಿ ಉತ್ಪಾದನೆಗೆ ರಾಜ್ಯ ಸರ್ಕಾರದಿಂದ ನೋಂದಾಯಿಸಲ್ಪಟ್ಟ ವಿತರಕರ ಸಂಖ್ಯೆ ಎಷ್ಟು, ಯಾವ ದರದಲ್ಲಿ ಮೇಲ್ಛಾವಣೆ ಘಟಕಗಳನ್ನು ಅಳವಡಿಸಲಾಗುತ್ತಿದೆ ; ಬ್ಯಾಂಕುಗಳಿಂದ ಯಾವ ದರದಲ್ಲಿ ಸಾಲ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ?

## ರಾಜ್ಯದಲ್ಲಿ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆ ನೀಡುವ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೬೨೩ (೧೫೬೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರ ಅನುಕೂಲಕ್ಕಾಗಿ ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆಗೆ ಕೊಡಲು ಎಷ್ಟು ಕೇಂದ್ರಗಳನ್ನು ತೆರೆಯಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈವರೆಗೆ ಈ ಯೋಜನೆಯಿಂದ ಎಷ್ಟು ರೈತರಿಗೆ ಪ್ರಯೋಜನವಾಗಿದೆ ;

(ಇ) ಕಳೆದ ೨ ವರ್ಷಗಳಲ್ಲಿ ಈ ಯೋಜನೆಗಾಗಿ ಹಂಚಿಕೆಯಾದ ಹಣ ಹಾಗೂ ಬಿಡುಗಡೆಯಾದ ಮೊತ್ತವೆಷ್ಟು ? (ಜಿಲ್ಲಾವಾರು ವಿವರ ನೀಡುವುದು )

## ರಾಜ್ಯದಲ್ಲಿ ಕೃಷಿ ಉತ್ಪಾದನೆಗಳನ್ನು ಶೇಖರಿಸಲು ಗೋದಾಮುಗಳ ಅವಶ್ಯಕತೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೬೨೪ (೧೫೬೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ಉತ್ಪಾದನೆಗಳನ್ನು ಶೇಖರಿಸಲು ಎಷ್ಟು ಗೋದಾಮುಗಳ ಅವಶ್ಯಕತೆ ಇದೆ ;

(ಆ) ರಾಜ್ಯದಲ್ಲಿ ಕೃಷಿ ಇಲಾಖೆ ಹಾಗೂ ರಾಜ್ಯ ಗೋದಾಮು ನಿಗಮದಿಂದ ನಡೆಸಲ್ಪಡುತ್ತಿರುವ ಗೋದಾಮುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರೈತರ ಬೇಡಿಕೆಗೆ ಬೇಕಾದಷ್ಟು ಪ್ರಮಾಣ ಗೋದಾಮುಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಪಟ್ಟಣ ಪಂಚಾಯತಿ, ಪುರಸಭೆ, ನಗರಸಭೆಗಳಲ್ಲಿ ಒಳಚರಂಡಿ ಸೌಲಭ್ಯ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೬೨೫ (೧೫೬೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪಟ್ಟಣ ಪಂಚಾಯತಿ, ಪುರಸಭೆ, ನಗರಸಭೆ ಹಾಗೂ ಮಹಾನಗರ ಪಾಲಿಕೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಮೇಲಿನ ಸ್ಥಳೀಯ ಸಂಸ್ಥೆಗಳಲ್ಲಿ ಒಳಚರಂಡಿ ಸೌಲಭ್ಯಗಳು ಇರುವ ಸಂಸ್ಥೆಗಳ ವಿವರ ನೀಡುವುದು ;

(ಇ) ಉಳಿದ ಸ್ಥಳೀಯ ಸಂಸ್ಥೆಗಳಲ್ಲಿ ಒಳಚರಂಡಿ ಸೌಲಭ್ಯ ಒದಗಿಸಲು ಯಾವ ಕಾಲ ಮಿತಿಯಲ್ಲಿ ಯೋಜನೆ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದ ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆಗಳಲ್ಲಿ ಸೃಷ್ಟಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೬೨೬ (೧೫೬೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಹಾಗೂ ಮಹಾನಗರ ಪಾಲಿಕೆಗಳಲ್ಲಿ ಸೃಷ್ಟಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ನೀಡುವುದು ;

(ಆ) ದೊಡ್ಡ ಸಂಖ್ಯೆಯಲ್ಲಿ ಹುದ್ದೆಗಳು ಖಾಲಿ ಇರುವುದರಿಂದ ಸ್ಥಳೀಯ ಆಡಳಿತ ಪರಿಣಾಮಕಾರಿಯಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಹುದ್ದೆಗಳನ್ನು ಯಾವಾಗ ತುಂಬಲಾಗುವುದು ?

## ತೋಟಗಾರಿಕೆ ಇಲಾಖೆಯ ಖಾಲಿ ಹುದ್ದೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨೭ (೧೬೪೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಯ ವಿವಿಧ ಜಿಲ್ಲಾ ಮತ್ತು ತಾಲ್ಲೂಕು ಹೋಬಳಿ ಮಟ್ಟದಲ್ಲಿ ಮಂಜೂರಾದ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಖಾಲಿ ಹುದ್ದೆಗಳಿಂದ ಇಲಾಖಾ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಹಿನ್ನಡೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಖಾಲಿ ಹುದ್ದೆಗಳನ್ನು ಸಂಪೂರ್ಣವಾಗಿ ಭರ್ತಿ ಮಾಡುವ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಮುಂದೆ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ಒದಗಿಸುವುದು)

## ಮಣ್ಣಿನ ಆರೋಗ್ಯ ಕಾರ್ಡ್ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨೮ (೧೬೪೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮಣ್ಣು ಆರೋಗ್ಯ ಪರೀಕ್ಷಾ ಘಟಕವನ್ನು ಪ್ರಾರಂಭ ಮಾಡಲಾಗಿದೆಯೇ ;

(ಆ) ಮಾಡಲಾಗಿದ್ದರೆ, ಸದರಿ ಘಟಕಕ್ಕೆ ಯಾವ ಶ್ರೇಣಿಯ ಅಧಿಕಾರಿಯನ್ನು ನೇಮಕ ಮಾಡಲಾಗಿದೆ, ಸದರಿ ಅಧಿಕಾರಿಯ ಕಾರ್ಯವೇನು ;

(ಇ) ಇದುವರೆಗೂ ರಾಜ್ಯದಲ್ಲಿ ವಿತರಿಸಲಾದ ಮಣ್ಣು ಆರೋಗ್ಯ ಕಾರ್ಡ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕು, ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಮಣ್ಣು ಆರೋಗ್ಯ ಘಟಕ ಪ್ರಾರಂಭವಾದ ನಂತರ ಕೃಷಿ ಕ್ಷೇತ್ರದಲ್ಲಿ ಆಗಿರುವ ಉತ್ತಮ ಬದಲಾವಣೆಗಳಾವುವು ?

## ತೋಟಗಾರಿಕೆ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨೯ (೧೬೬೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳಾವುವು ;

(ಆ) ನಿಗಧಿಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿಗಳೇನು ; (ಜಿಲ್ಲಾ, ತಾಲ್ಲೂಕುವಾರು ವಿವರ ನೀಡುವುದು)

(ಇ) ಫಲಾನುಭವಿಗಳ ಆಯ್ಕೆಗೆ ನಿಗಧಿಪಡಿಸಿರುವ ಮಾನದಂಡಗಳೇನು;

(ಈ) ತೋಟಗಾರಿಕೆ ಇಲಾಖೆಯ ಮೂಲಕ ಉದ್ಯಾನವನಗಳನ್ನು ಅಭಿವೃದ್ಧಿಪಡಿಸುವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಉ) ತೋಟಗಾರಿಕೆ ಇಲಾಖೆಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಲು ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಕಬ್ಬು ಬೆಳೆಗಾರರ ಬಾಕಿ ಬಿಲ್ಲು ಪಾವತಿ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೩೦ (೧೬೭೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಭೀಕರ ಬರಗಾಲದಿಂದಾಗಿ ಆರ್ಥಿಕ ಸಂಕಷ್ಟದಲ್ಲಿರುವ ಕಬ್ಬು ಬೆಳೆಗಾರರಿಗೆ ಬಾಕಿ ಬಿಲ್ ಪಾವತಿ ಮಾಡದೇ ಇರುವುದರಿಂದ ಕಬ್ಬು ಬೆಳೆಗಾರರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ೨೦೧೩–೧೪, ೨೦೧೪–೨೦೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ಕಾರ್ಖಾನೆಗಳಿಗೆ ಎಷ್ಟು ಟನ್ ಕಬ್ಬು ಸರಬರಾಜಾಗಿದೆ ; (ಕಾರ್ಖಾನೆವಾರು ವಿವರ ನೀಡುವುದು)

(ಇ) ೨೦೧೩–೧೪, ೨೦೧೪–೨೦೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ಕಾರ್ಖಾನೆಗಳು ರೈತರಿಗೆ ಸಂದಾಯ ಮಾಡಿದ ಕಬ್ಬಿನ ಬಿಲ್ ಹಣವೆಷ್ಟು ; (ಕಾರ್ಖಾನೆವಾರು ವಿವರ ನೀಡುವುದು)

(ಈ) ೨೦೧೩–೧೪, ೨೦೧೪–೨೦೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ನುರಿಸಿದ ಕಬ್ಬಿಗೆ ಕಾರ್ಖಾನೆಗಳು ರೈತರಿಗೆ ಸಂದಾಯ ಮಾಡಬೇಕಾದ ಬಾಕಿ ಬಿಲ್ಲು ಎಷ್ಟು ; (ಕಾರ್ಖಾನೆವಾರು ವಿವರ ನೀಡುವುದು)

(ಉ) ರೈತರಿಗೆ ಕಬ್ಬಿನ ಬಾಕಿ ಬಿಲ್‌ನ್ನು ಯಾವ ಕಾಲಮಿತಿಯಲ್ಲಿ ಸಂದಾಯ ಮಾಡಲಾಗುವುದು, ಅದಕ್ಕಾಗಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ ?

# ಪಶು ಭಾಗ್ಯ ಯೋಜನೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೩೧ (೧೬೭೪) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ರೈತರಿಗೆ ಸ್ವಾವಲಂಬಿ ಜೀವನ ನಡೆಸಲು 'ಪಶುಭಾಗ್ಯ' ಯೋಜನೆಯನ್ನು ಜಾರಿಗೆ ತಂದಿದ್ದು ಬ್ಯಾಕ್‌ಲಿಂಕ್ ಇರುವುದರಿಂದ 'ಪಶುಭಾಗ್ಯ' ಯೋಜನೆಯಡಿ ಆಯ್ಕೆಯಾದ ರೈತರಿಗೆ ಸಾಲ ನೀಡದೆ ಇರುವುದರಿಂದ ರೈತರಿಗೆ ನಿಗಧಿತ ಅವಧಿಯಲ್ಲಿ ಯೋಜನೆಯ ಲಾಭ ಸಿಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಈ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವರ್ಷವಾರು, ಫಲಾನುಭವಿಗಳ ಸಹಿ, ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಈ ಯೋಜನೆಯಡಿ ಆಯ್ಕೆಯಾದ ಎಷ್ಟು ಜನ ಫಲಾನುಭವಿಗಳು ಈ ಯೋಜನೆಯ ಪ್ರಯೋಜನ ಪಡೆದುಕೊಂಡಿರುತ್ತಾರೆ, ಅವರಿಗೆ ಬಿಡುಗಡೆಯಾದ ಅನುದಾನವೆಷ್ಟು; ಬ್ಯಾಂಕ್ ಸಾಲವೆಷ್ಟು, ಯಾವ ಯಾವ ಬ್ಯಾಂಕ್‌ಗಳಿಂದ ಸಾಲ ಪಡೆದಿರುತ್ತಾರೆ ; (ತಾಲ್ಲೂಕುವಾರು, ವರ್ಷವಾರು, ಫಲಾನುಭವಿವಾರು, ಬ್ಯಾಂಕ್‌ವಾರು ಮಾಹಿತಿ ನೀಡುವುದು)

(ಈ) ಆಯ್ಕೆಯಾಗಿ ಬಾಕಿ ಇರುವ ಅರ್ಜಿದಾರರಿಗೆ ಬ್ಯಾಂಕ್ ಸಾಲ ಕೊಡಿಸುವಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ?

# ಬೆಳಗಾವಿ ಜಿಲ್ಲೆಯ ರೈತರಿಗೆ ಕೃಷಿ ಇಲಾಖೆಯ ಸಿಬ್ಬಂದಿ ಕೊರತೆಯಿಂದ ತೊಂದರೆ ಆಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೩೨ (೧೬೭೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಕೃಷಿ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿಂದ, ಕೃಷಿಯಲ್ಲಿ ಹೊಸ ಹೊಸ ತಂತ್ರಜ್ಞಾನ ಅಳವಡಿಸಿಕೊಳ್ಳುವಂತೆ ರೈತರಿಗೆ ಸಲಹೆ ಸಹಾಯ ನೀಡಲು ಸಿಬ್ಬಂದಿಯಿಲ್ಲದೆ ರೈತರು ತೊಂದರೆ ಅನುಭವಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಕೃಷಿ ಇಲಾಖೆಯಡಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಹುದ್ದೆಗಳವಾರು ಮಾಹಿತಿ ನೀಡುವುದು)

(ಇ) ಅದರಲ್ಲಿ ಸದ್ಯ ಖಾಯಂ ಆಗಿ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳು ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಈ) ಖಾಲಿ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗೆ ಭರ್ತಿ ಮಾಡಲಾಗುವುದು ?

# ಮೇಲ್ದರ್ಜೆಗೇರಿಸಲ್ಪಟ್ಟ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೩೩ (೧೬೭೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ನೂತನವಾಗಿ ಮೇಲ್ದರ್ಜೆಗೇರಿಸಲ್ಪಟ್ಟ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಿಗೆ ಸಿಎಮ್‌ಎಸ್‌ಟಿಡಿಪಿ ನಗರೋತ್ಥಾನ ಯೋಜನೆ ಎಸ್‌ಎಫ್‌ಸಿ ಮುಕ್ತನಿಧಿ ಮತ್ತು ೧೪ನೇ ಹಣಕಾಸು ಆಯೋಗದಡಿ ೨೦೧೫-೧೬ ಹಾಗೂ ೨೦೧೬-೧೭ನೇ ಸಾಲಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಮೇಲ್ದರ್ಜೆಗೇರಿಸಲ್ಪಟ್ಟ ಯಾವ ಯಾವ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಪಟ್ಟಣ ಪಂಚಾಯಿತಿ ಮತ್ತು ಪುರಸಭೆವಾರು ಮಾಹಿತಿ ನೀಡುವುದು)

(ಇ) ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಲ್ಲಿ ಅವಶ್ಯವಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡ ಕ್ರಮಗಳೇನು;

(ಈ) ಸ್ವಚ್ಛ ಭಾರತ ಯೋಜನೆಯಡಿ ಜಿಲ್ಲೆಯ ಪುರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳೇನು; ಅವುಗಳಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ?

## ರೈತರ ಸಾಲದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು):-**

೧೬೩೪ (೧೬೬೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಕೃಷಿ ರೈತರಿಗೆ ಕಳೆದ ವರ್ಷದ ಆಯವ್ಯಯದಲ್ಲಿ ಎಷ್ಟು ಮೊತ್ತದ ಸಾಲ ನೀಡಲು ಘೋಷಣೆ ಮಾಡಲಾಗಿತ್ತು ;

(ಆ) ರೈತರಿಗೆ ಸಾಲ ನೀಡಲು ಯಾವಾಗ ಆದೇಶ ಮಾಡಲಾಯಿತು;

(ಇ) ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಕೃಷಿ ಸಾಲವನ್ನು ಕಳೆದ ಸಾಲಿನಲ್ಲಿ ಎಷ್ಟು ರೈತರಿಗೆ ಯಾವ ದಿನಾಂಕದಿಂದ ಎಷ್ಟು ಮೊತ್ತ ನೀಡಲಾಗಿದೆ ; (ಕ್ಷೇತ್ರವಾರು ವಿವರ ನೀಡುವುದು)

(ಈ) ಶೇ. ೩ರ ಬಡ್ಡಿ ದರದಲ್ಲಿ ದೀರ್ಘಾವಧಿ ಸಾಲಗಳನ್ನು ಕಳೆದ ಸಾಲಿನಲ್ಲಿ ಎಷ್ಟು ರೈತರಿಗೆ ಯಾವ ದಿನಾಂಕ, ಎಷ್ಟು ಮೊತ್ತ ನೀಡಲಾಗಿದೆ ? (ಕ್ಷೇತ್ರವಾರು ಮಾಹಿತಿ ನೀಡುವುದು)

## ಕೃಷಿ ಭಾಗ್ಯ ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು):–**

೧೬೩೫ (೧೬೬೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಭಾಗ್ಯ ಯೋಜನೆಯನ್ನು ಜಾರಿಗೆ ತಂದಿದ್ದು ಯಾವಾಗ ;

(ಆ) ಸದರಿ ಯೋಜನೆಯ ರೂಪು ರೇಷೆಗಳೇನು ;

(ಇ) ರಾಜ್ಯದ ಯಾವ ಯಾವ ಜಿಲ್ಲೆ, ತಾಲ್ಲೂಕುಗಳಲ್ಲಿ ಕೃಷಿ ಭಾಗ್ಯ ಯೋಜನೆ ಜಾರಿಗೆ ಬಂದಿದೆ ;

(ಈ) ಹಾಗಿದ್ದಲ್ಲಿ, ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ? (ಕ್ಷೇತ್ರವಾರು ಮಾಹಿತಿ ನೀಡುವುದು)

## ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು):–**

೧೬೩೬ (೧೬೭೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಹಂತ–೩ಕ್ಕೆ ಸರ್ಕಾರ ನಿಗಧಿಪಡಿಸಿರುವ ಮೊತ್ತವೆಷ್ಟು ; ಸದರಿ ಮೊತ್ತವನ್ನು ಬಿಡುಗಡೆ ಮಾಡಲಾಗಿದ್ದು ಯಾವಾಗ ;

(ಆ) ಈ ಯೋಜನೆ ಅಡಿಯಲ್ಲಿ ಯಾವ ಯಾವ ರಸ್ತೆಗಳನ್ನು ಆಯ್ಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಜಿಲ್ಲಾ ಮುಖ್ಯ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಈ) ಹಾಗಿದ್ದಲ್ಲಿ, ಈಗಾಗಲೇ ಆಯ್ಕೆ ಮಾಡಿರುವ ಜಿಲ್ಲಾ ಮುಖ್ಯ ರಸ್ತೆಗಳಾವುವು ; (ಕ್ಷೇತ್ರವಾರು ವಿವರ ನೀಡುವುದು) ಯಾವ ಕಾಲಮಿತಿಯೊಳಗೆ ರಸ್ತೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ?

## ತುರುವೇಕೆರೆ ತಾಲ್ಲೂಕಿನ ಶಾಖಾ ಕಛೇರಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು):–**

೧೬೩೭ (೧೬೭೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನಲ್ಲಿರುವ ಬೆಸ್ಕಾಂನ ಶಾಖಾ ಕಛೇರಿಗಳೆಷ್ಟು; (ಹೆಸರು, ವಿಳಾಸ ಸಹಿತ ವಿವರ ಒದಗಿಸುವುದು)

(ಆ) ಮಾಯಸಂದ್ರದಲ್ಲಿರುವ ಶಾಖಾ ಕಛೇರಿಯ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳ ಸಂಖ್ಯೆ ಎಷ್ಟು ; ಕಾರ್ಯ ಒತ್ತಡ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಶಾಖಾ ಕಛೇರಿ ವ್ಯಾಪ್ತಿಯಲ್ಲಿ ಬರುವ ಪರಿವರ್ತಕಗಳು, ಗ್ರಾಹಕರು, ಫೀಡರ್‌ಗಳು, ೧೧ ಕೆವಿ ಮಾರ್ಗ ಹಾಗೂ ಕಾರ್ಯ ವಾಪ್ತಿ ಕಿಲೋಮೀಟರ್ ಎಷ್ಟು ;

(ಈ) ಇದೇ ಹೋಬಳಿಯ ಶೆಟ್ಟಿಗೊಂಡನಹಳ್ಳಿ ಗ್ರಾಮದಲ್ಲಿ ಶಾಖಾ ಕಛೇರಿ ತೆರೆಯಲು ಪ್ರಸ್ತಾವನೆ ಬಂದಿದೆಯೇ; ಹಾಗಾದರೆ, ಶಾಖಾ ಕಛೇರಿ ತೆರೆಯಲು ಯಾವಾಗ ಕ್ರಮ ಕೈಗೊಳ್ಳಲಾಗುವುದು?

## ಪ್ರಿಯದರ್ಶಿನಿ ಯೋಜನೆಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೬೩೮ (೧೫೨೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಿಯದರ್ಶಿನಿ ಯೋಜನೆಯಡಿ ಈವರೆಗೆ ಎಷ್ಟು ಮಹಿಳೆಯರನ್ನು ವಿವಿಧ ಸಹಕಾರ ಸಂಘಗಳಲ್ಲಿ ಸದಸ್ಯರನ್ನಾಗಿ ಮಾಡಿಕೊಳ್ಳಲು ಸರ್ಕಾರ ಅನುದಾನ ನೀಡಿದೆ ;

(ಆ) ಮಾಹಿತಿ ಕೊರತೆಯಿಂದ ಮಹಿಳೆಯರು ಸಹಕಾರ ಚಳುವಳಿಗಳಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಲು ಸಾಧ್ಯವಾಗದೆ, ಸರ್ಕಾರದ ಪ್ರಿಯದರ್ಶಿನಿ ಯೋಜನೆಯ ಲಾಭವನ್ನು ಪಡೆಯಲು ಸಾಧ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

## ಇಲಾಖೆಯ ವತಿಯಿಂದ ವಿತರಿಸುವ ಕೃಷಿ ಸಾಲ ಸೌಲಭ್ಯಗಳ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೩೯ (೧೬೭೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಜಿಲ್ಲೆ ವ್ಯಾಪ್ತಿಯಲ್ಲಿ ಇಲಾಖಾ ವತಿಯಿಂದ ವಿತರಿಸುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ಧೀರ್ಘಾವಧಿ ಕೃಷಿ ಸಾಲ ಪಡೆದಿರುವ ರೈತ ಫಲಾನುಭವಿಗಳ ಸಂಖ್ಯೆ ಎಷ್ಟು, ಅಂಕಿ ಅಂಶಗಳ ಸಹಿತ ವಿವರ ನೀಡುವುದು ;

(ಆ) ಈ ಸಾಲ ಸೌಲಭ್ಯ ಯೋಜನೆಯಡಿ ಇಲ್ಲಿಯವರೆಗೂ ಒಟ್ಟು ಎಷ್ಟು ಮೊತ್ತದ ಸಾಲ ವಿತರಿಸಲಾಗಿದೆ ;

(ಇ) ಕಳೆದ ೩ ವರ್ಷಗಳಿಂದ ಈ ಯೋಜನೆ ಅಡಿಯಲ್ಲಿ ಸಂಬಂಧಿಸಿದಂತೆ ಎಷ್ಟು ಮೊತ್ತದ ಸಾಲವನ್ನು ಮನ್ನಾ ಮಾಡಲಾಗಿದೆ ?

## ತಲಘಟ್ಟಪುರದ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೪೦ (೧೪೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಲಘಟ್ಟಪುರದಲ್ಲಿರುವ ಕರ್ನಾಟಕ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯ ಬಲವರ್ಧನೆಗೆ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ೨೦೧೬–೧೭ನೇ ಸಾಲಿನಲ್ಲಿ ಸಂಸ್ಥೆಯ ಅಭಿವೃದ್ಧಿಗಾಗಿ ಬಜೆಟ್‌ನಲ್ಲಿ ಬಿಡುಗಡೆಯಾದ ಅನುದಾನವನ್ನು ಯಾವ್ಯಾವ ಕಾರ್ಯಗಳಿಗೆ ವಿನಿಯೋಗಿಸಲಾಗಿದೆ ಮತ್ತು ಈ ಕಾರ್ಯಗಳು ಯಾವ ಹಂತದಲ್ಲಿವೆ ;

(ಇ) ಪ್ರಸ್ತುತ ಈ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಮತ್ತು ಅಧಿಕಾರಿಗಳ ಸಂಖ್ಯೆ ಎಷ್ಟು ?

# ರಾಜ್ಯದಲ್ಲಿನ ಯಶಸ್ವಿನಿ ರೈತ ಆರೋಗ್ಯ ರಕ್ಷಣಾ ಯೋಜನೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೪೧ (೧೫೨೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿ ಯಶಸ್ವಿನಿ ರೈತ ಆರೋಗ್ಯ ರಕ್ಷಣಾ ಯೋಜನೆಯಡಿಯಲ್ಲಿ ಒಟ್ಟು ನೋಂದಾಯಿತ ಫಲಾನುಭವಿಗಳ ಸಂಖ್ಯೆ ಎಷ್ಟು ; ಹಾಗೂ ಇವರಿಂದ ಸಂಗ್ರಹಿತ ಸದಸ್ಯತ್ವ ಶುಲ್ಕದ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ೨೦೧೫–೧೬ನೇ ಸಾಲಿನಲ್ಲಿ ಸೌಲಭ್ಯ ಕೋರಿದ ಒಟ್ಟು ಅರ್ಜಿದಾರರ ಸಂಖ್ಯೆ ಮತ್ತು ಅರ್ಜಿದಾರರಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ಒಟ್ಟು ಸಂಖ್ಯೆ ಎಷ್ಟು ; ಬಿಡುಗಡೆಯಾದ ಒಟ್ಟು ಮೊತ್ತವೆಷ್ಟು ; ನೆಟ್‌ವರ್ಕ್ ಆಸ್ಪತ್ರೆಗಳಿಗೆ ಪಾವತಿಸಲು ಬಾಕಿಯಿರುವ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಸೌಲಭ್ಯ ಕೋರಿದ ಫಲಾನುಭವಿಗಳಿಗೆ ಇಲಾಖೆಯು ಸಂಬಂಧಿತ ಆಸ್ಪತ್ರೆಗಳಿಂದ ಕಿರುಕುಳ ನೀಡಿದ, ನೆರವು ನೀಡದ ಕುರಿತು ದಾಖಲಾದ ದೂರುಗಳ ಸಂಖ್ಯೆ ಎಷ್ಟು ; ಈ ಬಗ್ಗೆ ಇಲಾಖೆ ತೆಗೆದುಕೊಂಡ ಕ್ರಮಗಳೇನು ? (ಜಿಲ್ಲಾವಾರು ವಿವರ ನೀಡುವುದು)

# ರಾಜ್ಯದಲ್ಲಿ ವಿದ್ಯುತ್ ಚಾಲಿತ ಚಿತಾಗಾರವನ್ನು ಹೊಂದಿರುವ ಪೌರಾಡಳಿತ ಸಂಸ್ಥೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೪೨ (೧೫೩೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದ್ಯುತ್ ಚಾಲಿತ ಚಿತಾಗಾರಗಳನ್ನು ಹೊಂದಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಮತ್ತು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ವಿದ್ಯುತ್ ಚಾಲಿತ ಚಿತಾಗಾರವನ್ನು ನಿರ್ಮಿಸಲು ತಗಲುವ ಅಂದಾಜು ವೆಚ್ಚವೆಷ್ಟು ; ಇವುಗಳನ್ನು ನಿರ್ಮಿಸಲು ಇರುವ ಮಾನದಂಡಗಳೇನು ; (ಪ್ರತಿಯನ್ನು ಒದಗಿಸುವುದು)

(ಇ) ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತ್ ಗಳಲ್ಲಿ ವಿದ್ಯುತ್ ಚಾಲಿತ ಚಿತಾಗಾರಕ್ಕೆ ಸಾರ್ವಜನಿಕರಿಂದ ಹೆಚ್ಚಿನ ಬೇಡಿಕೆ ಇರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ಇವುಗಳನ್ನು ನಿರ್ಮಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಇಲ್ಲವಾದಲ್ಲಿ, ಕಾರಣವೇನು ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಲ ವಿದ್ಯುತ್ ಸ್ಥಾವರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೪೩ (೧೫೩೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಲ ವಿದ್ಯುತ್ ಉತ್ಪಾದನಾ ಘಟಕಗಳ ಸಂಖ್ಯೆ ಎಷ್ಟು ; ಅವು ಯಾವುವು ಮತ್ತು ಅವುಗಳು ಕಾರ್ಯ ನಿರ್ವಹಿಸುತ್ತಿರುವ ನದಿಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಲ ವಿದ್ಯುತ್ ಉತ್ಪಾದನಾ ಘಟಕಗಳು ಉತ್ಪಾದಿಸುವ ವಿದ್ಯುತ್ತಿನ ಪ್ರಮಾಣವೆಷ್ಟು ? (ಜಿಲ್ಲಾವಾರು, ಘಟಕವಾರು ವಿವರ ನೀಡುವುದು)

## ರಾಜ್ಯದಲ್ಲಿ ಅಲ್ಪಾವಧಿ ಕೃಷಿ ಸಾಲ ಪಡೆದ ರೈತರುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೪೪ (೧೫೩೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಕೃಷಿ ಪತ್ತಿನ ಸಹಕಾರ ಸಂಘಗಳಿಂದ ವಿತರಿಸಲಾದ ಅಲ್ಪಾವಧಿ ಕೃಷಿಸಾಲ ಪಡೆದ ಒಟ್ಟು ರೈತರ ಸಂಖ್ಯೆ ಎಷ್ಟು ಮತ್ತು ಸಾಲದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಭೀಕರ ಬರಗಾಲದ ಹಿನ್ನೆಲೆಯಲ್ಲಿ ಸಂಕಷ್ಟಕ್ಕೊಳಗಾದ ರೈತರಿಗೆ ಮಧ್ಯಮಾವಧಿ ಹಾಗೂ ದೀರ್ಘಾವಧಿ ಸಾಲಗಳ ಕಂತನ್ನು ಒಂದು ವರ್ಷದ ಅವಧಿಗೆ ಮುಂದುವರೆಸಿದಂತೆ ಅಲ್ಪಾವಧಿ ಕೃಷಿ ಸಾಲದ ಅವಧಿಯನ್ನು ಮುಂದುವರಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಕಾರಣವೇನು ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ವಿದ್ಯುತ್ ಸಮಸ್ಯೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಪದವೀಧರರ ಕ್ಷೇತ್ರ):–**

೧೬೪೫ (೧೭೦೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ವಿದ್ಯುತ್ ಸಮಸ್ಯೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ದೀನದಯಾಳ್ ಉಪಾಧ್ಯಾಯ ಗ್ರಾಮೀಣ ವಿದ್ಯುತ್ತೀಕರಣ ಯೋಜನೆಯಡಿ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿವೆ; (ವಿವರ ನೀಡುವುದು)

(ಇ) ಚಿಕ್ಕಮಗಳೂರು ಜಿಲ್ಲೆ ಮಲೆನಾಡು ಪ್ರದೇಶವಾದ್ದರಿಂದ ಮಳೆಗಾಲದಲ್ಲಿ ಮರಗಳು ವಿದ್ಯುತ್ ತಂತಿಯ ಮೇಲೆ ಬಿದ್ದು ವಾರಗಟ್ಟಲೆ ಹಳ್ಳಿಗಳಿಗೆ ವಿದ್ಯುತ್ ಸಮಸ್ಯೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆ ಬಗೆಹರಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ರೇಷ್ಮೆ ಬೆಳೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಪದವೀಧರರ ಕ್ಷೇತ್ರ):–**

೧೬೪೬ (೧೭೦೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಎಷ್ಟು ಜಮೀನಿನ ವಿಸ್ತೀರ್ಣದಲ್ಲಿ ರೇಷ್ಮೆ ಬೆಳೆ ಬೆಳೆಯಲಾಗುತ್ತಿದೆ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಚಿಕ್ಕಮಗಳೂರು ಜಿಲ್ಲೆಯ ರೇಷ್ಮೆ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವೃಂದವಾರು ಮಾಹಿತಿ ಒದಗಿಸುವುದು)

(ಇ) ಚಿಕ್ಕಮಗಳೂರು ಜಿಲ್ಲೆಯಲ್ಲಿ ರೇಷ್ಮೆ ಬೆಳೆ ಬೆಳೆಯಲು ರೈತರಿಗೆ ಉತ್ತೇಜನ ನೀಡಲು ಇಲಾಖೆಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ವಿವರ ಒದಗಿಸುವುದು?

## ಕೃಷಿ ಬೆಲೆ ಆಯೋಗದ ಶಿಫಾರಸ್ಸುಗಳ ಅನುಷ್ಠಾನದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೬೪೭ (೧೬೩೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಬೆಲೆ ಆಯೋಗವು ಡಿಸೆಂಬರ್–೨೦೧೫ರಲ್ಲಿ ರಾಜ್ಯದ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ಸದೃಢ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸುವ ಸಲುವಾಗಿ ಕೆಲವು ಶಿಫಾರಸ್ಸುಗಳನ್ನು ಮಾಡಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಆಯೋಗವು ಮಾಡಿರುವ ಪ್ರಮುಖ ಶಿಫಾರಸ್ಸುಗಳು ಯಾವುವು; ಶೀಘ್ರವಾಗಿ ಜಾರಿಗೆ ತರಬೇಕೆಂದು ಮಾಡಿರುವ ಶಿಫಾರಸ್ಸುಗಳು ಯಾವುವು;

(ಇ) ಶಿಫಾರಸ್ಸುಗಳನ್ನು ಜಾರಿಗೆ ತರುವ ಸಂಬಂಧ ಸರ್ಕಾರವು ಯಾವ ಶಿಫಾರಸ್ಸುಗಳನ್ನು ಪರಿಗಣಿಸಿದೆ; ಇವುಗಳನ್ನು ಜಾರಿಗೆ ತರಲು ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ;

(ಈ) ಆ ಪೈಕಿ ಯಾವ ಶಿಫಾರಸ್ಸುಗಳನ್ನು ಪರಿಗಣಿಸಿಲ್ಲ; ಪರಿಗಣಿಸದಿರಲು ಕಾರಣವೇನು?

## ಬಿತ್ತನೆ ಬೀಜಗಳ ಬೆಲೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೬೪೮ (೧೬೩೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಭತ್ತ, ಶೇಂಗಾ, ಹೆಸರು, ಗೋವಿನ ಜೋಳದ ಬಿತ್ತನೆ ಬೀಜಗಳ ಬೆಲೆಯ ವಿವರ ನೀಡುವುದು; ಸರ್ಕಾರಿ ಮತ್ತು ಪ್ರಮುಖ ಖಾಸಗಿ ಕಂಪನಿಗಳ ಬಿತ್ತನೆ ಬೀಜಗಳ ಬೆಲೆ ವಿವರ ನೀಡುವುದು;

(ಆ) ಈ ಬಾರಿ ಖಾಸಗಿ ಕಂಪನಿಗಳ ಬಿತ್ತನೆ ಬೀಜಗಳ ಬೆಲೆಗಳಲ್ಲಿ ತೀವ್ರ ಹೆಚ್ಚಳವಾಗಿರುವುದು ನಿಜವೇ; ಇದಕ್ಕೆ ಕಾರಣವೇನು;

(ಇ) ರೈತರಿಗೆ ಕಡಿಮೆ ದರದಲ್ಲಿ ಸಮರ್ಪಕ ಬಿತ್ತನೆ ಬೀಜ ನೀಡುವಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; ಬಿತ್ತನೆ ಬೀಜ ವಿತರಣೆಯ ಪ್ರಮಾಣದಲ್ಲಿ ಕುಂಠಿತವಾಗಿರುವುದು ನಿಜವೇ?

## ಗ್ರಾಮಗಳಲ್ಲಿ ಅನಿಯಮಿತ ವಿದ್ಯುತ್ ಕಡಿತದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೬೪೯ (೧೬೬೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕು ಮೇಗುಂದಾ ಹೋಬಳಿಯ ಜಯಪುರ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಪದೇ ಪದೇ ವಿದ್ಯುತ್ ಕಡಿತಗೊಳಿಸುತ್ತಿದ್ದು, ಅಲ್ಲಿನ ವಿದ್ಯಾರ್ಥಿಗಳು ಮೆಸ್ಕಾಂ ಕಚೇರಿ ಎದುರು ಪ್ರತಿಭಟನೆ ನಡೆಸಿರುವುದು ನಿಜವೇ;

(ಆ) ಈ ರೀತಿ ಅಸಮರ್ಪಕ ವಿದ್ಯುತ್ ಪೂರೈಕೆಗೆ ಕಾರಣವೇನು;

(ಇ) ಸಮರ್ಪಕ ವಿದ್ಯುತ್ ಪೂರೈಕೆಗೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?

## ಅಸಮರ್ಪಕ ತ್ಯಾಜ್ಯ ವಿಲೇವಾರಿ

**ಶ್ರೀ ರಾಮಚಂದ್ರಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೫೦ (೧೬೪೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಯಲಹಂಕದಲ್ಲಿರುವ ರೈತ ಸಂತೆಯಲ್ಲಿ ರೈತರ ತರಕಾರಿ ಮಾರಾಟದ ನಂತರ ಉಳಿಯುವ ಹಸಿ ತ್ಯಾಜ್ಯ ಸಮರ್ಪಕವಾಗಿ ವಿಲೇವಾರಿಯಾಗದೆ ವಾಸನೆ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದಾಗಿ ಸಾರ್ವಜನಿಕ ರೋಗರುಜಿನಗಳು ಬರುವ ಸಾಧ್ಯತೆ ಇದ್ದು, ತ್ಯಾಜ್ಯ ಬಿದ್ದಿರುವ ಜಾಗವನ್ನು ಕಂಡು ವ್ಯಾಪಾರಸ್ಥರೂ ಒಳಗೆ ಬರದಿರುವುದರಿಂದಾಗಿ ವ್ಯಾಪಾರ ವಹಿವಾಟಿನಲ್ಲಿ ಕುಸಿತವುಂಟಾಗುವ ಸಾಧ್ಯತೆ ಇದ್ದು, ಈ ಸಂಬಂಧ ರೈತ ಸಂತೆಯ ಸಮರ್ಪಕ ನಿರ್ವಹಣೆಗೆ ಯಾವ ರೀತಿಯ ಕಟ್ಟುನಿಟ್ಟಿನ ಹಾಗೂ ಶಿಸ್ತು ಕ್ರಮ ಕೈಗೊಳ್ಳಲಾಗಿದೆ?

## ಕೆ.ಎಂ.ಎಫ್.ನಲ್ಲಿ ನಡೆದಿರುವ ಭ್ರಷ್ಟಾಚಾರದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೫೧ (೧೬೬೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೨ ರಿಂದ ೨೦೧೬ನೇ ಸಾಲಿನವರೆಗೆ ಕರ್ನಾಟಕ ಹಾಲು ಮಹಾಮಂಡಲ (ಕೆ.ಎಂ.ಎಫ್.)ನಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವ್ಯಾವ ವಿಭಾಗಗಳಲ್ಲಿ ಅವ್ಯವಹಾರಗಳು ನಡೆದಿವೆ; (ಸಂಪೂರ್ಣ ವಿವರ ನೀಡುವುದು)

(ಆ) ಈ ಅವ್ಯವಾಹರಗಳಲ್ಲಿ ಭಾಗಿಯಾದ ಅಧಿಕಾರಿ/ನೌಕರರು ಯಾರು; (ಹೆಸರು ಹಾಗೂ ಪದನಾಮ ಸಹಿತ ವಿವರ ನೀಡುವುದು) ತಪ್ಪಿತಸ್ಥರ ವಿರುದ್ಧ ಈವರೆಗೆ ಕೈಗೊಂಡಿರುವ ಕ್ರಮಗಳೇನು;

(ಇ) ಪಶು ಆಹಾರದ ಕಚ್ಚಾವಸ್ತು ಖರೀದಿ ಮಾಡುವಾಗ ಅನುಸರಿಸುವ ಮಾನದಂಡಗಳೇನು? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ನಕಲಿ ಬೀಜಗಳ ಹಾವಳಿ ತಡೆಗಟ್ಟುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೬೫೨ (೧೬೫೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೌಲ್ಯದ ನಕಲಿ ಬೀಜಗಳ ಹಾವಳಿ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಸರ್ಕಾರವು ರೈತರ ಹಿತದೃಷ್ಟಿಯಿಂದ ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ದಾಳಿ ನಡೆಸಿದ ಪ್ರಕರಣಗಳೆಷ್ಟು; (ವಿವರ ನೀಡುವುದು)

(ಆ) ಹಾಗೆಯೇ ದಾಳಿಗೆ ಒಳಗಾದ ಅಧಿಕಾರಿ/ದಳ್ಳಾಳಿ ಮತ್ತು ದಾಳಿ ನಡೆಸಿದ ಸ್ಥಳ ಮತ್ತು ಆ ಉಗ್ರಾಣಗಳು ಯಾರ ಒಡೆತನದಲ್ಲಿದೆ, ದಾಳಿ ಮಾಡಿ ಜಪ್ತಿ ಮಾಡಿದ ದವಸ–ಧಾನ್ಯದ ವಿವರ ಹಾಗೂ ಇವುಗಳ ಮೌಲ್ಯವೆಷ್ಟು? (ಕಳೆದ ಮೂರು ವರ್ಷದ ವಿವರಗಳನ್ನು ಜಿಲ್ಲಾವಾರು ನೀಡುವುದು)

## SCP/TSP ಯೋಜನೆಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೬೫೩ (೧೬೫೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ೨೦೧೩ ರಿಂದ ೨೦೧೫–೧೬ನೇ ಸಾಲಿನವರೆಗೆ ಎಸ್.ಸಿ.ಪಿ./

ಟಿ.ಎಸ್.ಪಿ. ಯೋಜನೆಗಳ ಅಡಿಯಲ್ಲಿ ಇಲಾಖೆಗೆ ಮಂಜೂರಾದ, ಬಿಡುಗಡೆಯಾದ, ಖರ್ಚು ಮಾಡಲಾದ, ಉಳಿತಾಯವಾಗಿರುವ ಮೊತ್ತ ಎಷ್ಟು; (ವರ್ಷವಾರು, ಕಾಮಗಾರಿವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ಕಾಮಗಾರಿಗಳನ್ನು ಟೆಂಡರ್ ಮುಖಾಂತರ ನೀಡಲಾಗಿದೆಯೇ, ಅಥವಾ ನೇರವಾಗಿ ನೀಡಲಾಗಿದೆಯೇ, ಟೆಂಡರ್ ಮೂಲಕ ನೀಡಿದ್ದಲ್ಲಿ, ಪ್ರತ್ಯೇಕ ಕಾಮಗಾರಿಗಳಿಗೆ ಒಟ್ಟು ಎಷ್ಟು ಜನ ಗುತ್ತಿಗೆದಾರರು ಕಾಮಗಾರಿಗಳಿಗೆ ಕೊಟೇಶನ್ ಸಲ್ಲಿಸಿರುತ್ತಾರೆ, ಸಲ್ಲಿಸಿದ್ದಲ್ಲಿ ಸಂಪೂರ್ಣ ಕಾಮಗಾರಿವಾರು ವಿವರ ನೀಡುವುದು?

## ರಾಜ್ಯದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರಿಗೆ ಪರಿಹಾರಧನ ವಿತರಣೆ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) ಮತ್ತು ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೬೫೪ (೧೬೫೨ & ೧೬೫೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; (ವಿವರವನ್ನು ಜಿಲ್ಲಾವಾರು ನೀಡುವುದು);

(ಆ) ಆತ್ಮಹತ್ಯೆ ಮಾಡಿಕೊಂಡವರ ಪೈಕಿ ಎಷ್ಟು ರೈತ ಕುಟುಂಬಗಳಿಗೆ ಪರಿಹಾರ ಧನ ವಿತರಣೆಯಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಆತ್ಮಹತ್ಯೆ ಮಾಡಿಕೊಂಡವರ ಪೈಕಿ ವಿವಿಧ ಕಾರಣಗಳಿಂದಾಗಿ ಪರಿಹಾರ ಧನ ನೀಡದಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು, ಪ್ರಕರಣವಾರು ವಿವರ ನೀಡುವುದು)

(ಈ) ರೈತರ ಆತ್ಮಹತ್ಯೆಗೆ ಕಾರಣಗಳು ಮತ್ತು ಪರಿಹಾರಗಳ ಕುರಿತು, ಯಾರ್‍ಯಾರು ಗಣ್ಯರು ಸರ್ಕಾರಕ್ಕೆ ಸಲಹೆಗಳನ್ನು ನೀಡಿರುತ್ತಾರೆ ಮತ್ತು ಈ ಸಲಹೆಗಳೇನು, ಆ ಪೈಕಿ ಎಷ್ಟು ಸಲಹೆಗಳನ್ನು ಸರ್ಕಾರ ಒಪ್ಪಿಕೊಂಡು ಜಾರಿಗೆ ತಂದಿದೆ;

(ಉ) ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಸಾಲಮನ್ನಾ ಮಾಡಿರುವ ಪ್ರಕರಣಗಳೆಷ್ಟು ? (ವಿವರ ನೀಡುವುದು)

## ರೈತರಿಗೆ ರಿಯಾಯಿತಿ ದರದಲ್ಲಿ ನೀಡುವ ಟಾರ್ಪಲ್‌ನಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೫ (೧೬೪೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರಿಗೆ ರಿಯಾಯಿತಿ ದರದಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ;

(ಆ) ೨೦೧೫–೧೬ನೇ ಸಾಲಿನಲ್ಲಿ ಮಲೆನಾಡು ಪ್ರದೇಶವಾದ ಕೊಡಗು ಜಿಲ್ಲೆಯಲ್ಲಿ ರಿಯಾಯಿತಿ ದರದಲ್ಲಿ ನೀಡಲಾದ ಸೌಲಭ್ಯಗಳ ಮಾಹಿತಿ ನೀಡುವುದು;

(ಇ) ೨೦೧೫–೧೬ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ರೈತರಿಗೆ ರಿಯಾಯಿತಿ ದರದಲ್ಲಿ ನೀಡಲಾದ ಟಾರ್ಪಲ್‌ನಲ್ಲಿ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ;

(ಉ) ರಿಯಾಯಿತಿ ದರದಲ್ಲಿ ರೈತರಿಗೆ ನೀಡುವ ಸೌಲಭ್ಯಗಳಲ್ಲಿ ಮಧ್ಯವರ್ತಿಗಳನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗಿದೆ?

## ರಾಜ್ಯದಲ್ಲಿನ ಹೋಮ್ ಸ್ಟೇಗಳ ಮಾಹಿತಿ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೬೫೬ (೧೫೨೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಹೋಮ್ ಸ್ಟೇಗಳು ಇವೆ; ಎಲ್ಲೆಲ್ಲಿ ಇವೆ; ತಾಲ್ಲೂಕುವಾರು ಮಾಹಿತಿ ನೀಡುವುದು;

(ಆ) ಸರ್ಕಾರದಲ್ಲಿ ನೋಂದಣಿ ಆಗಿರುವ ಹೋಮ್ ಸ್ಟೇಗಳ ಸಂಖ್ಯೆ ಎಷ್ಟು; ಹಾಗೂ ನೋಂದಣಿಯಾಗದಿರುವ ಹೋಮ್ ಸ್ಟೇಗಳ ಸಂಖ್ಯೆ ಎಷ್ಟು;

(ಇ) ಇದಕ್ಕಾಗಿ ಇರುವ ನೀತಿ ನಿಯಮಗಳೇನು; (ವಿವರ ನೀಡುವುದು) ಈ ಬಗ್ಗೆ ಇಲಾಖೆ ಈವರೆಗೆ ಕೈಗೊಂಡಿರುವ ಕ್ರಮಗಳಾವುವು?

## ಬೆಂಗಳೂರಿನಲ್ಲಿ ಅನಿಲಾಧಾರಿತ ವಿದ್ಯುತ್ ಸ್ಥಾವರ ಸ್ಥಾಪನೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೭ (೧೬೫೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದ್ಯುತ್ ಅವಘಡಗಳಿಂದಾಗಿ ಕಳೆದ ೧ ವರ್ಷದಿಂದ ಮೃತಪಟ್ಟವರ ಹಾಗೂ ಗಾಯಗೊಂಡವರ ಸಂಖ್ಯೆ ಎಷ್ಟು; ಮೃತಪಟ್ಟ ಕುಟುಂಬಗಳಿಗೆ ನೀಡಿರುವ ಪರಿಹಾರ ಮೊತ್ತವೆಷ್ಟು;

(ಆ) ಬೆಂಗಳೂರಿನ ಅನೇಕ ರಸ್ತೆಗಳಲ್ಲಿ ಟ್ರಾನ್ಸ್‌ಫಾರ್ಮರ್‌ಗಳನ್ನು ಅಪಾಯಕಾರಿ ರೀತಿಯಲ್ಲಿ ಅಳವಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಇಂತಹ ಎಷ್ಟು ಟ್ರಾನ್ಸ್‌ಫಾರ್ಮರ್‌ಗಳನ್ನು ಇಲಾಖೆ ಗುರುತಿಸಿದೆ; ಇವುಗಳಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ಸರ್ಕಾರ ಕೈಗೊಂಡ ಮುಂಜಾಗ್ರತೆಯ ಕ್ರಮಗಳೇನು; (ವಿವರ ನೀಡುವುದು)

(ಈ) ಬೆಂಗಳೂರು ನಗರಕ್ಕೆ ಸಮರ್ಪಕ ವಿದ್ಯುತ್ ಪೂರೈಸಲು ಅನಿಲಾಧಾರಿತ ವಿದ್ಯುತ್ ಸ್ಥಾವರ ಸ್ಥಾಪನೆ ಮಾಡುವ ಪ್ರಸ್ತಾಪನೆ ಸರ್ಕಾರದ ಮುಂದಿದೆಯೇ;

(ಉ) ಹಾಗಿದ್ದಲ್ಲಿ, ಸದರಿ ಸ್ಥಾವರವನ್ನು ಸ್ಥಾಪಿಸಲು ವೆಚ್ಚ ಮಾಡುತ್ತಿರುವ (ಅಂದಾಜಿಸಲಾಗಿರುವ) ಅನುದಾನವೆಷ್ಟು; ಎಷ್ಟು ಅವಧಿಯಲ್ಲಿ ಈ ಒಂದು ಯೋಜನೆ ಪೂರ್ಣಗೊಳ್ಳುವುದು?

## ಕೃಷಿ ಮಾರುಕಟ್ಟೆಗಳಲ್ಲಿನ ಮೂಲ ಸೌಕರ್ಯಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೮ (೧೬೫೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಬಹುತೇಕ ಕೃಷಿ ಮಾರುಕಟ್ಟೆಗಳಲ್ಲಿ ಮೂಲ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮಧ್ಯವರ್ತಿಗಳ ಹಾವಳಿಗಳಿಂದ ರೈತರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಯ ಕೃಷಿ ಮಾರುಕಟ್ಟೆಗಳಲ್ಲಿ ಈ ಮಧ್ಯವರ್ತಿಗಳ ಮುಖಾಂತರ ವ್ಯವಹಾರ ನಡೆಯುವ ಪದ್ಧತಿ ಇನ್ನು ಚಾಲ್ತಿಯಲ್ಲಿದೆ; ಇದನ್ನು ತಡೆಯಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

## ಹಾಲು ಉತ್ಪಾದಕರಿಗೆ ನೀಡುತ್ತಿರುವ ಸಹಾಯಧನ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೯ (೧೬೫೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಒಟ್ಟು ಹಾಲು ಉತ್ಪಾದಕರ ಸಹಕಾರ ಸಂಘಗಳು ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಹಾಲು ಉತ್ಪಾದಕರಿಗೆ ಪ್ರತಿ ಲೀಟರಿಗೆ ನೀಡುತ್ತಿರುವ ಸಹಾಯಧನ ಎಷ್ಟು;

(ಇ) ಸಹಾಯಧನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

## ರೈತರಿಗೆ ನೀಡುತ್ತಿರುವ ಸೌಲಭ್ಯಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೬೦ (೧೬೫೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆ ವತಿಯಿಂದ ರಾಜ್ಯದ ರೈತರಿಗೆ ನೀಡುತ್ತಿರುವ ಸೌಲಭ್ಯಗಳಾವುವು;

(ಆ) ಪ್ರಸಕ್ತ ಸಾಲಿನಲ್ಲಿ ರೈತರಿಗೆ ಕೃಷಿ ಉಪಕರಣ ಮತ್ತು ಇನ್ನೂ ಇತರೆ ಯೋಜನೆಗಳಿಗೆ ನೀಡಿರುವ ಸಹಾಯ ಧನವೆಷ್ಟು;

(ಇ) ಸದರಿ ಯೋಜನೆಗಳಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಇದರಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು; ವೆಚ್ಚ ಮಾಡದೆ ಉಳಿದಿರುವ ಅನುದಾನವೆಷ್ಟು? (ವಿವರ ನೀಡುವುದು)

## ರಾಜ್ಯದಲ್ಲಿ ಭೀಕರ ಬರವಿರುವುದರಿಂದ ರೈತರು ಸಂಕಷ್ಟದಲ್ಲಿರುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೧೬೬೧ (೧೪೯೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ವರ್ಷ ಹೈದರಬಾದ್–ಕರ್ನಾಟಕ ಜಿಲ್ಲೆಯಲ್ಲಿ ಬರ ಆವರಿಸಿರುವುದರಿಂದ ರೈತರು ಯಾವುದೇ ರೀತಿಯ ಬೆಳೆಗಳನ್ನು ಬೆಳೆಯದೇ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಂಕಷ್ಟದಲ್ಲಿರುವ ರೈತರಿಗೆ ಆರ್ಥಿಕವಾಗಿ ಸಹಾಯವಾಗಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು;

(ಇ) ಬೀದರ್ ಜಿಲ್ಲೆಯಲ್ಲಿ ಎಷ್ಟು ರೈತರಿಗೆ ಆರ್ಥಿಕವಾಗಿ ಸಹಾಯವಾಗಿದೆ? (ವಿವರ ನೀಡುವುದು)

## ಸೌರಶಕ್ತಿಯ ಬಳಕೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೧೬೬೨ (೧೬೯೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸೌರ ಶಕ್ತಿ ಬಳಕೆಯ ಜನಪ್ರಿಯತೆಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು;

(ಆ) ಅದರಲ್ಲೂ ಬಿಸಿಲಿನ ಪ್ರದೇಶವಾದ ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳಲ್ಲಿ ಸೌರ ಶಕ್ತಿ ಬಳಕೆಗೆ ರೂಪಿಸಿರುವ ಯೋಜನೆಗಳು ಯಾವುವು ;

(ಇ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಸೌರಶಕ್ತಿಯ ಪಾರ್ಕ್ ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದೆಯೇ?

## ಬೀದರ್ ಜಿಲ್ಲೆಯ ಪಶುಭಾಗ್ಯ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೩ (೧೬೯೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಪಶು ಭಾಗ್ಯ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೧೫–೨೦೧೬ನೇ ಸಾಲಿನಲ್ಲಿ ಪಶುಭಾಗ್ಯ ಯೋಜನೆಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪಶುಭಾಗ್ಯ ಯೋಜನೆ ಅಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಿದ್ದ ಅನುದಾನವು ಸರಿಯಾದ ರೀತಿಯಲ್ಲಿ ಫಲಾನುಭವಿಗಳಿಗೆ ತಲುಪಿಸಲಾಗಿದೆಯೇ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೪ (೧೬೯೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು; ಈ ಅನುದಾನ ಸಮರ್ಪಕವಾಗಿ ಬಳಕೆಯಾಗಿದೆಯೇ;

(ಆ) ಕಳೆದ ೩ ವರ್ಷಗಳಿಂದ ಲೋಕೋಪಯೋಗಿ ಇಲಾಖೆಯಿಂದ ಹೊಸ ರಸ್ತೆಗಳ ನಿರ್ಮಾಣಕ್ಕಾಗಿ ಬಿಡುಗಡೆಯಾದ ಅನುದಾನ ಎಷ್ಟು? (ಕೈಗೊಂಡ ಕಾಮಗಾರಿಗಳ ವಿವರ ನೀಡುವುದು)

## ಚಾಮರಾಜನಗರ ಜಿಲ್ಲೆ ತೆರಕಣಾಂಬಿಯಲ್ಲಿ ವಿದ್ಯುತ್ ವ್ಯತ್ಯಯವಾಗಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೫ (೧೬೪೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೇ ತಿಂಗಳ ೩೧ ಜೂನ್, ೧ರ ರಾತ್ರಿ ಬಿದ್ದ ಭಾರೀ ಮಳೆಗೆ ತೆರಕಣಾಂಬಿ ವಿದ್ಯುತ್ ಕೇಂದ್ರದಿಂದ ಕೆಲಸೂರಿನವರೆಗೆ ಹೆಚ್ಚಿನ ಸಂಖ್ಯೆಯ ವಿದ್ಯುತ್ ಕಂಬಗಳು ಧರೆಗುರುಳಿ, ವಿದ್ಯುತ್ ವ್ಯತ್ಯಯ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಎಷ್ಟು ಕಂಬಗಳು ಧರೆಗುರುಳಿ ವ್ಯತ್ಯಯ ಉಂಟಾಗಿರುತ್ತದೆ. ಕಂಬಗಳನ್ನು ಆಳವಾಗಿ ಬಿಗಿಯಾಗಿ ನೆಡದೇ ಇದ್ದುದೇ ಇದಕ್ಕೆ ಕಾರಣವಲ್ಲವೇ ; (ಕಾರಣ ಸಹಿತ ವಿವರ ನೀಡುವುದು)

(ಆ) ಇದನ್ನು ಯಾವ ಕಾಲಮಿತಿಯೊಳಗೆ ಸರಿಪಡಿಸಲಾಯಿತು. ಈ ಭಾಗದಲ್ಲಿ ಭೂಮಿಯು ಕಪ್ಪುಜೇಡಿ ಮಣ್ಣಿನಿಂದ ಕೂಡಿದ ಅಳ್ಳಕವಾದ ಮಣ್ಣಾಗಿದ್ದು, (ಲೂಸ್ ಸಾಯಿಲ್) ಕಂಬಗಳ ಗ್ರೌಂಡ್ ಮಾರ್ಕ್‌ನ್ನು ಎತ್ತರಿಸಿ ಉದ್ದವಾದ ಕಂಬಗಳನ್ನು ಆಳವಾಗಿ ನೆಟ್ಟು ಕಾಂಕ್ರಿಟ್ ಹಾಕುವ ಬಗ್ಗೆ ಅಗತ್ಯವಾದ ಕಡೆ ಊರುಗಂಬಗಳನ್ನು (ಗೈ) ಅಳವಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಚಾಮರಾಜನಗರ ಜಿಲ್ಲೆಯ ಕಬ್ಬಳ್ಳಿ–ಪರಮಾಪುರ–ಸಂಪಿಗೆಪುರ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೬ (೧೬೪೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯ ಪ್ರಮುಖ ರಸ್ತೆಯಾದ ಕಬ್ಬಳ್ಳಿ–ಪಡಗೂರು–ಪರಮಾಪುರ–ಸಂಪಿಗೆಪುರ ರಸ್ತೆಯು ಹದಗೆಟ್ಟಿದ್ದು, ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಒಂದು ವರ್ಷದ ಹಿಂದೆ ದುರಸ್ಥಿಯಾಗಿದ್ದ ರಸ್ತೆ ಹದಗೆಡಲು ಕಾರಣಗಳೇನು; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಜಿಲ್ಲೆಯ ಪ್ರಮುಖ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಈ ರಸ್ತೆಯನ್ನು ಕೂಡಲೇ ದುರಸ್ಥಿ ಮಾಡಲು ಕ್ರಮ ಜರುಗಿಸಲಾಗುವುದೇ ?

## ತೆಂಗು ಟೆಕ್ನಾಲಜಿ ಪಾರ್ಕ್ ಸ್ಥಾಪಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೭ (೧೬೪೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಇರುವ ತೆಂಗಿನ ತೋಟದ ವಿಸ್ತೀರ್ಣ ಮತ್ತು ತೆಂಗಿನ ಮರಗಳ ಸಂಖ್ಯೆ, ಎಳೆನೀರು ಮತ್ತು ತೆಂಗಿನ ಕಾಯಿಯ ವಾರ್ಷಿಕ ಉತ್ಪನ್ನ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಮೈಸೂರು ಅಥವಾ ಚಾಮರಾಜನಗರದಲ್ಲಿ ತೆಂಗು ಟೆಕ್ನಾಲಜಿ ಪಾರ್ಕ್ ಸ್ಥಾಪನೆಗೆ ಸರ್ಕಾರ ಕ್ರಮ ತೆಗೆದುಕೊಳ್ಳಲಾಗಿದೆಯೇ, ತೆಂಗಿನ ಕಾಯಿ, ಕೊಬ್ಬರಿ ಪುಡಿ ತಯಾರಿಕಾ ಘಟಕ, ತೆಂಗಿನ ನಾರಿನ ಕೈಗಾರಿಕೆಗಳ ಅಭಿವೃದ್ಧಿಗೆ ಕ್ರಮ ತೆಗೆದುಕೊಳ್ಳಲಾಗುವುದೇ ?

## ಎಫ್.ಆರ್.ಪಿ. ದರ ನಿಗದಿ ಕುರಿತು

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೮ (೧೬೮೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಸರ್ಕಾರ ನಿಗದಿಪಡಿಸಿರುವ ಎಫ್.ಆರ್.ಪಿ. ದರ ಎಷ್ಟು;

(ಆ) ಈ ಮೂರು ವರ್ಷಗಳಲ್ಲಿ ಸರ್ಕಾರ ನಿಗದಿಪಡಿಸಿದ ದರ ಪಾವತಿ ಮಾಡದ ಕಾರ್ಖಾನೆಗಳು ಎಷ್ಟು;

(ಇ) ಸಕ್ಕರೆ ಕಾರ್ಖಾನೆಗಳು ಸರ್ಕಾರ ನಿಗಧಿಪಡಿಸಿದ ಎಫ್.ಆರ್.ಪಿ. ದರ ನೀಡಿರುವುದರ ಬಗ್ಗೆ ಖಾತ್ರಿ ಪಡಿಸಿಕೊಳ್ಳಲು ಯಾವ ಮಾನದಂಡ ಅನುಸರಿಸಲಾಗುತ್ತಿದೆ ?

## ರೈತರ ಕಬ್ಬಿನ ಬೆಳೆಗೆ ನೀಡಿದ ಚೆಕ್ ಬೌನ್ಸ್ ಪ್ರಕರಣ ಕುರಿತು

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೯ (೧೬೮೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರೈತರ ಕಬ್ಬಿನ ಬೆಲೆಗೆ ನೀಡಲಾದ ಚೆಕ್ ಬೌನ್ಸ್ ಆಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆಯೇ;

(ಆ) ಯಾವ ಯಾವ ಕಾರ್ಖಾನೆಗಳ ಎಷ್ಟು ಮೊತ್ತದ ಚೆಕ್‌ಗಳು ಬೌನ್ಸ್ ಆಗಿವೆ ? (ಕಾರ್ಖಾನೆವಾರು ಮಾಹಿತಿ ಒದಗಿಸುವುದು)

## ಕಬ್ಬು ಬೆಳೆಗಾರರಿಗೆ ಕಾರ್ಖಾನೆಗಳು ನೀಡಬೇಕಾಗಿರುವ ಬಾಕಿ ಮೊತ್ತ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೦ (೧೬೮೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಕಳೆದ ಮೂರು ವರ್ಷಗಳಿಂದ ಎಷ್ಟು ಕಾರ್ಖಾನೆಗಳು ರೈತರಿಗೆ ನೀಡಬೇಕಾದ ಕಬ್ಬಿನ ಮೊತ್ತವನ್ನು ಬಾಕಿ ಉಳಿಸಿಕೊಂಡಿವೆ ಕಾರ್ಖಾನೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಪ್ರತಿ ಕಾರ್ಖಾನೆಗಳ ಹೆಸರು ಸಹಿತ ವಿವರ ಒದಗಿಸುವುದು)

## ಅಪೆಕ್ಸ್, ಬ್ಯಾಂಕ್ ಸಕ್ಕರೆ ಕಾರ್ಖಾನೆಗಳಿಗೆ ನೀಡಿದ ಸಾಲದ ವಿವರ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೭೧ (೧೬೮೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ಯಾವ ಯಾವ ಸಕ್ಕರೆ ಕಾರ್ಖಾನೆಗಳಿಗೆ ಸಾಲ ನೀಡಿರುತ್ತದೆ ; ಈ ಸಾಲ ಯಾವ ರೀತಿಯದ್ದಾಗಿದೆ; ಅಂದರೆ, ಅಲ್ಪಾವಧಿ, ದೀರ್ಘಾವಧಿ ಮತ್ತು ಇತ್ಯಾದಿ ಸಾಲಗಳ ವಿವರಗಳನ್ನು ನೀಡುವುದು ;

(ಆ) ಈ ಸಾಲ ಪಡೆದಿರುವ ಎಷ್ಟು ಕಾರ್ಖಾನೆಗಳು ಪ್ರಾರಂಭಗೊಂಡಿದೆ; ಎಷ್ಟು ಕಾರ್ಖಾನೆಗಳು ನಿರ್ಮಾಣ ಹಂತದಲ್ಲಿವೆ; ಇನ್ನೂ ಪ್ರಾರಂಭವಾಗದೇ ಇರುವ ಕಾರ್ಖಾನೆಗಳು ಎಷ್ಟು? (ವಿವರ ನೀಡುವುದು)

## ಡಿ.ಸಿ.ಸಿ. ಬ್ಯಾಂಕುಗಳು ಸಕ್ಕರೆ ಕಾರ್ಖಾನೆಗಳಿಗೆ ನೀಡಿದ ಸಾಲದ ವಿವರ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೭೨ (೧೬೮೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಎಷ್ಟು ಡಿ.ಸಿ.ಸಿ ಬ್ಯಾಂಕ್‌ಗಳು ಯಾವ ಯಾವ ಸಕ್ಕರೆ ಕಾರ್ಖಾನೆಗಳಿಗೆ ಸಾಲ ನೀಡಿರುತ್ತವೆ; ಈ ಸಾಲ ಯಾವ ರೀತಿಯದ್ದಾಗಿದೆ; ಅಂದರೆ ಅಲ್ಪಾವಧಿ, ದೀರ್ಘಾವಧಿ ಮತ್ತು ಇತ್ಯಾದಿ ಸಾಲಗಳ ವಿವರಗಳನ್ನು ನೀಡುವುದು;

(ಆ) ಈ ಸಾಲ ಪಡೆದಿರುವ ಎಷ್ಟು ಕಾರ್ಖಾನೆಗಳು ಪ್ರಾರಂಭಗೊಂಡಿವೆ; ಎಷ್ಟು ಕಾರ್ಖಾನೆಗಳು ನಿರ್ಮಾಣ ಹಂತದಲ್ಲಿವೆ: ಇನ್ನೂ ಪ್ರಾರಂಭವಾಗಿರದೇ ಇರುವ ಕಾರ್ಖಾನೆಗಳ ವಿವರ ನೀಡುವುದು ?

## NEW SOFI LOAN–೨೦೧೫ರ ಸಾಲದ ವಿವರ

ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–

೧೬೭೩ (೧೬೮೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಕೇಂದ್ರ ಸರ್ಕಾರದ NEW SOFI LOAN –೨೦೧೫ರಡಿಯಲ್ಲಿ ಸಾಲ ಪಡೆದ ರಾಜ್ಯದ ಸಕ್ಕರೆ ಕಾರ್ಖಾನೆಗಳು ಯಾವುವು ? (ಹೆಸರು ಸಹಿತ ಮತ್ತು ಪಡೆದ ಸಾಲದ ಮೊತ್ತದ ವಿವರ ನೀಡುವುದು)

## ಐ.ಇ.ಎಂ. ಯೋಜನೆ ಕುರಿತು

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೭೪ (೧೬೮೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸ ಸಕ್ಕರೆ ಕಾರ್ಖಾನೆಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರದಿಂದ ಐ.ಇ.ಎಂ. ಪಡೆದಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ;

(ಆ) ಈಗ ಪಡೆದಿರುವ ಐ.ಇ.ಎಂ. ಎಷ್ಟು ಅವಧಿಗೆ ಇರುತ್ತದೆ; ಮತ್ತು ಮುಕ್ತಾಯಗೊಳ್ಳುವುದು ಯಾವಾಗ ?

## ಸಕ್ಕರೆ ಕಾರ್ಖಾನೆ ಪ್ರಾರಂಭಿಸಲು ಇರುವ ನಿಯಮ ಕುರಿತು

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೭೫ (೧೬೮೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆ ಪ್ರಾರಂಭಿಸಲು ಇರುವ ಮಾನದಂಡಗಳೇನು ;

(ಆ) ಕಾರ್ಖಾನೆ ಸ್ಥಾಪನೆಗೆ ಅನುಮತಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ಪ್ರಮಾಣ ಪತ್ರಗಳು ಯಾವುವು ?

**ಶ್ರೀನಿವಾಸ್**
ಕಾರ್ಯದರ್ಶಿ (I/c)
ಕರ್ನಾಟಕ ವಿಧಾನ ಪರಿಷತ್ತು

---

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 049/800 ಪ್ರತಿಗಳು/28–06–2016